MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ “ಇದು ರಾಷ್ಟ್ರದ ಧ್ವನಿ”

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 240 | ಮಂಗಳವಾರ : 08–07–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 240 | TUESDAY : 08–07–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಾಯಚೂರಿನ ಐತಿಹಾಸಿಕ ಕೋಟೆ ಪ್ರದೇಶಕ್ಕೆ ಸಚಿವ ಎನ್‌ಎಸ್‌ಬಿ ಭೇಟಿ



**ಯುವ ಮಾರ್ಗ ಸುದ್ದಿ**

**ರಾಯಚೂರ,ಜು.7**–ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರು ಜುಲೈ 7ರಂದು ರಾಯಚೂರ ನಗರದ ಐತಿಹಾಸಿಕ ಕೋಟೆ ಪ್ರದೇಶಕ್ಕೆ ಭೇಟಿ ನೀಡಿದರು.

ಮೊದಲಿಗೆ ಬಸ್ ನಿಲ್ದಾಣಕ್ಕೆ ಹತ್ತಿರದ ಕೋಟೆಯ ಕಂದಕದ ಕಾಮಗಾರಿಯ ವೀಕ್ಷಣೆ ನಡೆಸಿದರು. ಈಗಾಗಲೇ ಹಲವಾರು ದಿನಗಳಿಂದ ಜೆಸಿಬಿಗಳ ಮೂಲಕ ಕಂದಕದ ಶುಚಿತ್ವ ಕಾರ್ಯ ನಡೆಯುತ್ತಿದೆ. ಇದಕ್ಕೆ ನಗರದ ನಿವಾಸಿಗಳು,**(2ನೇಪುಟಕ್ಕೆ)**

## ಹೃದಯಾಘಾತ ತಡೆಗೆ ವಾರ್ಷಿಕ ತಪಾಸಣೆ

**ಬೆಂಗಳೂರು,ಜು.7**–ರಾಜ್ಯದಲ್ಲಿ ಸಂಭವಿಸುತ್ತಿರುವ ಹೃದಯಾಘಾತಗಳನ್ನು ತಡೆಯಲು ಶಾಲಾಮಕ್ಕಳು, ಸರ್ಕಾರಿ ನೌಕರರೂ ಸೇರಿದಂತೆ ಶಾಲಾ ಮಕ್ಕಳ ವಾರ್ಷಿಕ ನಿಯಮಿತ ಆರೋಗ್ಯ ತಪಾಸಣೆಗೆ ಸೂಕ್ತ ಯೋಜನೆಯನ್ನು ರೂಪಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಹೇಳಿದರು.

ಹಠಾತ್ ಸಾವಿಗೆ ಕಾರಣವಾಗುವ ಹೃದ್ರೋಗವನ್ನು ಅಧಿಸೂಚಿತ ಕಾಯಿಲೆ ಎಂದು ರಾಜ್ಯಸರ್ಕಾರ ಘೋಷಿಸುತ್ತಿದೆ ಎಂದು ಅವರು ಹರದಯಾಘಾತ ಸಾವುಗಳ ಬಗ್ಗೆ ಅಧ್ಯಯನಕ್ಕಾಗಿ ರಚಿಸಿದ್ದ ತಜ್ಞರ ಸಮಿತಿಯ ವರದಿ ಸ್ವೀಕರಿಸಿದ ನಂತರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಹೃದಯ ಸಂಬಂಧಿ ರೋಗಗಳನ್ನು ತಡೆಯಲು ಹಾಗೂ ಈ ಬಗ್ಗೆ ಜಾಗೃತಿ ಮೂ



ಡಿಸಲು ಸರ್ಕಾರ ಕ್ರಮಕೈಗೊಂಡಿದೆ. 15 ವರ್ಷದೊಳಗಿನ ಮಕ್ಕಳಿಗೆ ವರ್ಷಕ್ಕೊಮ್ಮೆ ಹೃದಯ ತಪಾಸಣೆ ನಡೆಸಲಾಗುವುದು. ಹಾಗೆಯೇ ಸರ್ಕಾರಿ ನೌಕರರು ಮತ್ತು ಗುತ್ತಿಗೆ ನೌಕರರಿಗೂ ವರ್ಷಕ್ಕೊಮ್ಮೆ ಹೃದ್ರೋಗ, ರಕ್ತದೊತ್ತಡ, ಕ್ಯಾನ್ಸರ್‌ನಂತಹ ರೋಗಗಳ ತಪಾಸಣೆ ನಡೆಸಲಾಗುವುದು ಎಂದು ಹೇಳಿದರು.

ಗೃಹ ಆರೋಗ್ಯ ಯೋಜನೆಯಡಿ ಈ ತಪಾಸಣೆಗಳನ್ನು ನಡೆಸಲಾಗುತ್ತದೆ ಎಂದು ಹೇಳಿದರು.

ಹೃದಯಾಘಾತಗಳಿಗೆ ಜನರ ಜೀವನಶೈಲಿಯೇ ಕಾರಣವಾಗಿದೆ. ಕೋವಿಡ್ ಲಸಿಕೆಯಿಂದ ಹೃದಯಾಘಾತಗಳು ಆಗುತ್ತಿದೆ ಎಂಬ ಅಂಶಗಳು ಇಲ್ಲ. ಈ ಬಗ್ಗೆ ಅಂತಾರಾಷ್ಟ್ರೀಯ ಮಟ್ಟದಲ್ಲೂ ಅಧ್ಯಯನ ನಡೆದಿದೆ. ಕೋವಿಡ್ ಲಸಿಕೆಯಿಂದ ಜನರಿಗೆ ಒಳ್ಳೆಯದಾಗಿದೆ. ಜನರ ಜೀವ ಉಳಿದಿದೆ ಎಂದು ಸ್ಪಷ್ಟಪಡಿಸಿದರು.

ಕೋವಿಡ್ ಲಸಿಕೆಯಿಂದ ಹೃದಯಾಘಾತಗಳಾಗುತ್ತಿವೆ ಎಂಬ ಅನುಮಾನಗಳನ್ನು ನಿವಾರಿಸಲು ಮುಖ್ಯಮಂತ್ರಿಗಳು ತಜ್ಞರ ಸಮಿತಿ ರಚಿಸಿದ್ದರು. ಈ ಸಮಿತಿ ಅಧ್ಯಯನ ನಡೆಸಿದೆ. ಕೋವಿಡ್ ಲಸಿಕೆಯಿಂದ ಹೃದಯಾಘಾತವಾಗಿಲ್ಲ ಎಂದು ಸ್ಪಷ್ಟಪಡಿಸಿದೆ ಎಂದರು.

ಸಮಿತಿಯ ಶಿಫಾರಸ್ಸಿನಂತೆ**(2ನೇಪುಟಕ್ಕೆ)**

## ಅನ್ನಭಾಗ್ಯ ಯೋಜನೆಯಲ್ಲಿ ಅಕ್ರಮ : ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮಕ್ಕೆ ಒತ್ತಾಯ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.7**– ತಾಲ್ಲೂಕಿನಲ್ಲಿ ಅನ್ನಾಭಾಗ್ಯ ಯೋಜನೆಯಡಿಯಲ್ಲಿ ಅಕ್ರಮವಾಗಿ ನಡೆಯುತ್ತದೆ, ಪತ್ರಿಯೊಬ್ಬರಿಗೆ ಎರಡು ಕೆಜಿ ಅಕ್ಕಿ ಕಡಿಮೆ ಕೊಟ್ಟು ಫಲಾನುಭವಿಗಳಿಗೆ ಮೋಸ ಮಾಡುತ್ತಿದ್ದಾರೆ, ಆಹಾರ ಇಲಾಖೆಯ ಅಧಿಕಾರಿಗಳ ಮೇಲೆ ಸೂಕ್ತ ಕ್ರಮಕ್ಕೆ ಗ್ಯಾರಂಟಿ ಯೋಜನೆ ತಾಲ್ಲೂಕು ಅಧ್ಯಕ್ಷ ವೆಂಕಟೇಶ ಗುತ್ತೇದಾರ ಒತ್ತಾಯಿಸಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷ ವೆಂಕಟೇಶ ಆರ್.ಗುತ್ತೇದಾರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಅನ್ನಭಾಗ್ಯ ಯೋಜನೆಯಡಿ ತಾಲೂಕಿನಲ್ಲಿ ಅನ್ನಭಾಗ್ಯ ಯೋಜನೆಯಡಿ 93070 ಪಡಿತರ ಚೀಟಿಗಳಿದ್ದು ಒಟ್ಟು 3 ಲಕ್ಷ ಪಡಿತರ ಚೀಟಿದಾರರು ಇದ್ದಾರೆ. ಚೀಟಿದಾರರಿಗೆ ಪ್ರತಿ ತಿಂಗಳು 2 ಕೆಜಿ ಅಕ್ಕಿ ಕಡಿಮೆ ಕೊಡುತ್ತಿದ್ದೀರಿ, ಪ್ರತಿ ತಿಂಗಳಿಗೆ 6 ಲಕ್ಷ ಕೆ.ಜಿ ಆಗುತ್ತದೆ ಇಷ್ಟೊಂದು ಪ್ರಮಾಣದ ಅಕ್ಕಿ ಎಲ್ಲಿಗೆ ಹೋಗುತ್ತದೆ ಗರಂ ಆದ ಘಟನೆ ಜರುಗಿತು.

ಅಂತ್ಯೋದಯ 9039, ಆದ್ಯತಾ 82080 ಆದ್ಯತೇತರ 1951, ಪಟ್ಟು 93,0



70 ಪಡಿತರ ಚೀಟಿಗಳಿವೆ ಪ್ರತಿ ತಿಂಗಳು ನ್ಯಾಯಬೆಲೆ ಅಂಗಡಿಗಳ ಮೂಲಕ ಅನ್ನಭಾಗ್ಯ ಅಕ್ಕಿಯಲ್ಲಿ ಪ್ರತಿ ಕಾರ್ಡ್ಗೆ 2 ಕೆಜಿ ಅಕ್ಕಿ ಕಡಿತಾ ಮಾಡುತ್ತಿದ್ದು ಇದರ ಲೆಕ್ಕ ತಿಂಗಳಿಗೆ 7 ಲಕ್ಷ ಕೆಜಿ ಅಕ್ಕಿ ಉಳಿಕೆ ಆಗುತ್ತದೆ ಇಷ್ಟೊಂದು ಪ್ರಮಾಣ ಅಕ್ಕಿ ಎಲ್ಲಿಗೆ ಹೋಗುತ್ತದೆ. ಆಹಾರ ನಿರೀಕ್ಷಕರು ಚೀಲ, ಮಳೆ, ಗಾಳಿ, ಬಿಸಿಲಿಗೆ ಹಾಳಾಗುತ್ತವೆ ಚೀಲಗಳಲ್ಲಿ ಸೋರಿಕೆ ಆಗುತ್ತದೆ ಎಂದು ಸಬೂಬು ಹೇಳಿ ಭಾರಿ ಗೋಲ್‌ಮಾಲ್ ಮಾಡುತ್ತಿದ್ದೀರಿ. ಕೂಡಲೇ ಆಹಾರ ಇಲಾಖೆ ಎಲ್ಲ ಅಧಿಕಾರಿ ಹಾಗೂ ಆಹಾರ ನಿರೀಕ್ಷಕರು ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲು ಕೂಡಲೇ ಸಂಬಂಧಿಸಿದ ಮೇಲಾ ಧಿಕಾರಿಗಳಿಗೆ ಸಮಿತಿ ಠರಾವ್ ಮಾಡಬೇಕೆಂದು ಸದಸ್ಯರಾದ ಎಂ.ಲಿಂಗರಾಜ, ಗದ್ದೆನಗೌಡ ಪಾಟೀಲ್ ಆಗ್ರಹಿಸಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸಭೆಗೆ ಸಿಡಿಪಿಓ, ಡಿಪೋ ಮ್ಯಾನೇಜನರ, ಆಹಾರ ಇಲಾಖೆ ಅಧಿಕಾರಿಗಳು ಸಭೆಗೆ ಬಂದಿಲ್ಲ. ಕೂಡಲೇ ಅವರ ವಿರುದ್ಧ ಶಿಸ್ತು ಕ್ರಮಕ್ಕೆ ಮೇಲಾಧಿಕಾರಿಗಳು ಪತ್ರ ಬರಯಬೇಕು. ಗ್ಯಾರಂಟಿ ಯೋಜನೆಗಳನ್ನು ಸಮರ್ಪಕ ಜಾರಿ ಮಾಡದೇ ಅಧಿಕಾರಿಗಳು ಕುಂಟು ನೆಪ ಹೇಳಿ ಸರ್ಕಾರಕ್ಕೆ ಕಳಂಕ ತರುವ ಕೆಲಸ ಅಧಿಕಾರಿಗಳು ಮಾಡುತ್ತಿದ್ದಾರೆ ಎಂದು ಸದಸ್ಯರು ಲಕ್ಷ್ಮೀದೇವಿ**(2ನೇಪುಟಕ್ಕೆ)**

## ಸಮಾಜದ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರನ್ನು ಅಮಾನತುಗೊಳಿಸಿ : ಲಿಂಗಪ್ಪ ಗೌಡೂರು ಆಗ್ರಹ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು.7**– ದೇಶದ ಮಾಜಿ ಪ್ರಧಾನಿ,ಹಸಿರು ಕ್ರಾಂತಿ ಹರಿಕಾರ ಬಾಬು ಜಗಜೀವನರಾಮ್‌ರ ಪುಣ್ಯತಿಥಿದಂದು ಪೂಜೆ ಮಾಡಿ ಗೌರವ ಸಲ್ಲಿಸುವಲ್ಲಿ ನಿರ್ಲಕ್ಷ್ಯ ವಹಿಸಿರುವ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಡಾ.ರಾಜಕುಮಾರ ಡೋಣಿರನ್ನು ಕೂಡಲೇ ಅಮಾನತುಗೊಳಿಸಬೇಕೆಂದು ದಲಿತ ಸಂಘಟನೆ ಮುಖಂಡ ಲಿಂಗಪ್ಪ ಗೌಡೂರು ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳು ಮಹಾನ್ ನಾಯಕರಿಗೆ ಅಗೌರವ ತೋರಿರುವ ಇಲಾಖೆ ಸಹಾಯಕ ನಿರ್ದೇಶಕ ಡಾ.ರಾಜಕುಮಾರ ಡೋಣಿರನ್ನು ಅಮಾನತುಗೊಳಿಸಬೇಕು.



ನಿರ್ಲಕ್ಷ ವಹಿಸಿರುವ ತಾಲೂಕು ಆಡಳಿತ ಹಾಗೂ ಪುರಸಭೆ ಅಧಿಕಾರಿಗಳ ಮೇಲೆ ಶಿಸ್ತುಕ್ರಮಕ್ಕೈಗೊಳ್ಳಬೇಕೆಂದು ದಲಿತ ಸಂಘಟನೆಗಳ ಮುಖಂಡ ಲಿಂಗಪ್ಪ ಗೌಡೂರ ಒತ್ತಾಯಿಸಿದರು.

ಪ್ರತಿಭಟನಾ ಕಾರ್ಯಕ್ರಮ ಉದ್ದೇಶಿಸಿ ಮಲ್ಲಪ್ಪ ಗೌಡೂರು,ಯಲ್ಲಪ್ಪ ಆಲ್ಬರ್ತಿ,ಶಿವರಾಜ ಕೊಪ್ಪರ ಮಾತನಾಡಿದರು.**(2ನೇಪುಟಕ್ಕೆ)**

## ಜಿಪಿಟಿ ಶಾಲಾ ಶಿಕ್ಷಕರನ್ನು ಬಿಎಲ್‌ಓ ಕಾರ್ಯದಿಂದ ಬಿಡುಗಡೆಗೊಳಿಸಲು ಮನವಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.7**–ತಾಲ್ಲೂಕಿನ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದರಿಂದ ಜೆ.ಪಿ.ಟಿ. ಶಾಲಾ ಶಿಕ್ಷಕರನ್ನು ಬಿ.ಎಲ್.ಓ. ಕಾರ್ಯದಿಂದ ಸಂಪೂರ್ಣವಾಗಿ ಬಿಡುಗಡೆಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು ತಾಲ್ಲೂಕು ಘಟಕವು ಸರ್ಕಾರವನ್ನು ಒತ್ತಾಯಿಸಿದೆ. ಈ ಕುರಿತು ಸಂಘದ ತಾಲ್ಲೂಕು ಅಧ್ಯಕ್ಷರಾದ ಗೋಪಾಲ ನಾಯಕ ಅವರು ಪಟ್ಟಣದ ತಹಸೀಲ್ದಾರ್ ಕಚೇರಿಯು ಆವರಣದಲ್ಲಿ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಿದರು.



ಮನವಿ ಸಲ್ಲಿಸಿದ ನಂತರ ಮಾತನಾಡಿದ ಗೋಪಾಲ ನಾಯಕ, "ತಾಲ್ಲೂಕಿನ ಬಹುತೇಕ ಶಾಲೆಗಳಲ್ಲಿ ಶಿಕ್ಷಕರ ಸಂಖ್ಯೆ ವಿರಳವಾಗಿದೆ. ಇದರಿಂದಾಗಿ ಮಕ್ಕಳಿಗೆ ಪಾಠ ಬೋಧಿಸುವುದು ಹಾಗೂ ಇತರೆ ಶಾಲಾ ಕಾರ್ಯಚಟುವಟಿಕೆಗಳನ್ನು ನಿರ್ವಹಿಸುವುದು ಅತ್ಯಂತ ಕಷ್ಟಕರವಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಶಿಕ್ಷಕರು ಬಿ.ಎಲ್.ಓ.**(2ನೇಪುಟಕ್ಕೆ)**

## ಸಾಮಾನ್ಯ ವರ್ಗಕ್ಕೆ ಮೀಸಲಾತಿ ಬಂದರೆ ನಾನೇ ಸ್ಪರ್ಧೆ ಮಾಡುತ್ತೇನೆ : ಹೂಲಗೇರಿ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರ,ಜು.7**– ಕಳೆದ ವಿಧಾನಸಭಾ ಚುನಾವಣೆಯಲ್ಲಿ ತಾವೂ ಸೋತು ನನ್ನ ಸೋಲಿಸಿದವರಿಗೆ' ಎಂತವರನ್ನು ಗೆಲ್ಲಿಸಿದ್ವಿ ಅಂತಾ ಈಗ ಪಶ್ಚಾತಾಪ ಆಗುತ್ತಿದೆ ಎಂದು ಮಾಜಿ ಶಾಸಕ, ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಡಿ.ಎಸ್ ಹೂಲಗೇರಿ ಮಾರ್ಮಿಕವಾಗಿ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಕಾಂಗ್ರೆಸ್ ತಾಲೂಕ ಎಸ್.ಸಿ ಮೋರ್ಚಾ ಅಧ್ಯಕ್ಷ ಉಮೇಶ ಐಹೊಳೆರ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜನರು ನನ್ನ ಕೈಹಿಡಿದರು. ಆದರೆ ನನ್ನಿಂದ ಸಹಾಯ, ಸಹಕಾರ ಪಡೆದು ತಿಂದು, ಉಂಡವರು ಬೆನ್ನಿಗೆ ಚೂರಿ ಹಾಕುವ ಕೆಲಸ ಮಾಡಿದ್ದರಿಂದ ನಾನು ಸೋತೆ, ಈಗ ಗೆದ್ದವರ ಬಗ್ಗೆ ನನ್ನ ಸೋಲಿಸಿದವರಿಗೆ ಈಗ ವ್ಯಥೆ ಪಡುತ್ತಿದ್ದಾರೆ ಈ ಭಾವನೆ ಚುನಾವಣೆಯಲ್ಲಿ ಬಂದಿದ್ದರೆ ನಾನು ಸೋಲುತ್ತಿರಲಿಲ್ಲ ಎಂದು ಹೇಳಿದರು.

ನಾವು ಎಷ್ಟೇ ಗಳಿಸಿದರು ಹಿಂದೆ ಕಟ್ಟಿಕೊಂಡು ಹೋಗುವುದಿಲ್ಲ ಅದಕ್ಕೂ ಮೊದಲು ಜನರಿಗೆ ಕ್ಷೇತ್ರಕ್ಕೆ ಒಳ್ಳೆಯ ಕೆಲಸ ಮಾಡಬೇಕು. ಕೆಲವರು ನಮ್ಮನ್ನು ಉಪಯೋಗ ಮಾಡಿಕೊಂಡು ಬಡಿಗೆ ನಮ್ಮ ಕೈಯಲ್ಲಿ ಕೊಟ್ಟು ಅಧಿಕಾರದಲ್ಲಿ ತಾವು ಇರುತ್ತಾರೆ ಇದನ್ನು ಎಸ್.ಸಿ, ಎಸ್.ಟಿ ಸಮುದಾಯದ ಜನರು ಅರ್ಥ ಮಾಡಿಕೊಂಡು ಬಡಿಗೆ ಅವರ ಕೈಗೆಕೊಟ್ಟು ಅಧಿಕಾರದ ಕುರ್ಚಿ ಮೇಲೆ ನಾವು ಕುಳಿತುಕೊಳ್ಳಬೇಕು. ಲಿಂಗಸುಗೂರು ಕ್ಷೇತ್ರ ಮುಂದಿನ ದಿನಗಳಲ್ಲಿ ಸಾಮಾನ್ಯ ವರ್ಗಕ್ಕೆ ಮೀಸಲಾದರೆ ಸ್ಪರ್ಧೆ ಮಾಡುವೇ ಎಂದು ಹೇಳಿದರು.

ಇದೇ ವೇಳೆ ಕಾಂಗ್ರೆಸ್ ಎಸ್.ಸಿ ಮೋರ್ಚಾ ನೂತನ ಅಧ್ಯಕ್ಷ ಉಮೇಶ ಐಹೊಳೆರವರಿಗೆ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಗ್ಯಾರಂಟಿ ಯೋಜನೆ ತಾಲೂಕ ಅಧ್ಯಕ್ಷ ವೆಂಕಟೇಶ ಗುತ್ತೆದಾರ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಪುರಸಭೆ ಸದಸ್ಯ ಮಹ್ಮದ್ ರಫಿ, ಗುಂಡಪ್ಪ ಸಾಹುಕಾರ, ಎಂ.ಲಿಂಗರಾಜ, ಶಿವಣ್ಣ ನಾಯಕ ಕೋಠಾ, ವಿಶ್ವಕ್ರಾಂತಿ ಗೆಜ್ಜಲಗಟ್ಟಾ, ಗದ್ದೆನಗೌಡ ಪಾಟೀಲ್, ಮುಕ್ತುಂಸಾಬ ಸೇರಿದಂತೆ ಇದ್ದರು.

## ಚಲನಚಿತ್ರ ನಟ ಯುವರಾಜಕುಮಾರರನ್ನು ಅಭಿನಂದಿಸಿದ ಅಭಿಮಾನಿಗಳು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.7**–ಪಟ್ಟಣದಲ್ಲಿ ಭಾನುವಾರ ಸಂಜೆ ಪಟ್ಟಣದಲ್ಲಿ ಕನ್ನಡ ಚಲನಚಿತ್ರ ನಟ ಯುವರಾಜಕುಮಾರ ತಮ್ಮ ಎರಡನೆ ಚಿತ್ರ ಎಕ್ಕ ಬಿಡುಗಡೆ ಹಿನ್ನೆಲೆಯಲ್ಲಿ ಮಂತ್ರಾಲಯದ ಶ್ರೀ ಗುರು ರಾಘವೇಂದ್ರ ಸ್ವಾಮಿ ಮಠಕ್ಕೆ ದರ್ಶನ ಅಂಗವಾಗಿ ತೆರಳುವ ಮಾರ್ಗದಲ್ಲಿ ಪಟ್ಟಣದಲ್ಲಿ ಅವರ ಅಭಿಮಾನಿಗಳು ಹಾಗೂ ಅಪ್ಪು ಅಭಿಮಾನಿಗಳು, ಪುನಿತ್ ರಾಜಕುಮಾರ ಅಭಿಮಾನಿಗಳು ಸೇರಿ ದೊಡ್ಮನೆ ಹುಡುಗ ಯುವರಾಜಕುಮಾರರವರಿಗೆ ಸನ್ಮಾನಿಸಿ ಅಭಿನಂದಿಸಿದರು. ಈ ವೇಳೆ ಚಲನಚಿತ್ರ ನಟ ಯುವರಾಜಕುಮಾರ ತಮ್ಮ ಎರಡನೆ ಚಿತ್ರ ಎಕ್ಕ ಬಿಡುಗಡೆ ಯಾಗಲಿದ್ದು ಅಭಿಮಾನಿಗಳು ಚಲನ ಚಿತ್ರವನ್ನು ಯಶಸ್ವಿಗೊ



ಳ್ಳಿಸುವಂತೆ ಕೋರಿದರು. ನೂರಾರು ಯುವಕರು ತಮ್ಮ ನೆಚ್ಚಿನ ನಟನನ್ನು ಹತ್ತಿರದಿಂದ ನೋಡಿ ಕಣ್ಣು ತುಂಬಿಕೊಂಡರು. ಸಿಂಧನೂರು ರಸ್ತೆಯಿಂದ ಅಪ್ಪು ವೃತ್ತದ ವರೆಗೆ ನೂರಾರು ಯುವಕರು ಬೈಕ್ ರ್ಯಾಲಿ ಮೂಲಕ ಸ್ವಾಗತಿಸಿ ಬೀಳ್ಕೊಟ್ಟರು.

## ಮೊದಲನೇಯ ಪುಟದಿಂದ

# ಹೃದಯಾಘಾತ ತಡೆಗೆ ವಾರ್ಷಿಕ ತಪಾಸಣೆ

ಆಸ್ಪತ್ರೆಯ ಹೊರಗೆ ಹಠಾತ್ ಹೃದ್ರೋಗದಿಂದ ಮರಣವಾಗುವುದನ್ನು ಗಮನದಲ್ಲಿಟ್ಟುಕೊಂಡು ಹೃದ್ರೋಗವನ್ನು ಅಧಿಸೂಚಿತ ಕಾಯಿಲೆ ಎಂದು ಘೋಷಣೆ ಮಾಡಲಾಗುತ್ತಿದೆ.

ಈ ಸಾವನ್ನು ಆರೋಗ್ಯ ಇಲಾಖೆಯ ಗಮನಕ್ಕೆ ತಂದರೆ ಕಡ್ಡಾಯವಾಗಿ ಮರಣೋತ್ತರ ಪರೀಕ್ಷೆಗೆ ಒಳಪಡಿಸುವ ನಿರ್ಧಾರ ತೆಗೆದುಕೊಳ್ಳಲು ಸರ್ಕಾರ ಸಹಮತ ಹೊಂದಿದೆ ಎಂದರು.

**ಹೃದಯಾಘಾತ ತಡೆಗೆ 6 ಶಿಫಾರಸ್ಸು**

ಹಾಸನ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಇತ್ತೀಚೆಗೆ ಯುವಜನರಲ್ಲಿ ಹೃದಯಾಘಾತದಿಂದ ಸಾವು ಸಂಭವಿಸಿದ್ದು ಅದನ್ನು ತಡೆಯಲು ಜಯದೇವ ಹೃದ್ರೋಗ ಸಂಸ್ಥೆ ನಿರ್ದೇಶಕ ಡಾ. ಕೆ.ಎಸ್ ರವೀಂದ್ರ ನಾಥ್ ನೇತೃತ್ವದ ತಂಡ 6 ಪ್ರಮುಖ ಶಿಫಾರಸುಗಳನ್ನು ರಾಜ್ಯ ಸರ್ಕಾರಕ್ಕೆ ನೀಡಿದೆ.

ಯುವ ವಯಸ್ಕರಲ್ಲಿ ಹಠಾತ್ ಹೃದಯ ಸಾವುಗಳಿಗೆ ಹೃದಯ ಕಣ್ಗಾವಲು ಕಾರ್ಯಕ್ರಮ ಮತ್ತು ರಾಷ್ಟ್ರೀಯ ನೋಂದಣಿ ಸ್ಥಾಪಿಸುವುವಂತೆ ಸಲಹೆ ನೀಡಿದೆ.ಜೊತೆಗೆ ಯುವ ವಯಸ್ಕರಲ್ಲಿ ವಿವರಿಸಲಾಗದ ಸಾವುಗಳಿಗೆ ಶವಪರೀಕ್ಷೆ ಆಧಾರಿತ ವರದಿ ಮತ್ತು ನೋಂದಣಿ ಮಾಡಬೇಕಾಗಿದೆ.ಹೃದಯ ಕಾಯಿಲೆ ಶಾಲಾ ಮಟ್ಟದಲ್ಲಿ ದಿನನಿತ್ಯದ ಹೃದಯ ತಪಾಸಣೆ ಮಾಡಿಸಬೇಕು ಎಂದು ಹೇಳಿದೆ.10 ನೇ ತರಗತಿ ಅಂದರೆ 15 ವರ್ಷ ವಯಸ್ಸು ಮೇಲ್ಪಟ್ಟ ಎಲ್ಲರಿಗೂ ಜನ್ಮಜಾತ ಹೃದಯ ಕಾಯಿಲೆಗಳು ಅಥವಾ , ಆನುವಂಶಿಕ ಲಯ ಅಸ್ವಸ್ಥತೆಗಳು, ಅಧಿಕ ತೂಕ ,ಬೊಜ್ಜು, ಅಧಿಕ ರಕ್ತದೊತ್ತಡ, ಲಿಪಿಡ್ ಅಸ್ವಸ್ಥತೆಗಳು ಮತ್ತು ಇನ್ಸುಲಿನ್ ಪ್ರತಿರೋಧ ಪರೀಕ್ಷಿಸಲು ವಿವರವಾದ ವೈದ್ಯಕೀಯ ಪರೀಕ್ಷೆ ಕಡ್ಡಾಯ ಮಾಡಬೇಕು ಎಂದು ತಿಳಿಸಿದೆ.

ಹೃದಯರಕ್ತನಾಳದ ಕಾಯಿಲೆಗಳು, ಅವುಗಳ ಕಾರಣಗಳು, ಅಪಾಯಕಾರಿ ಅಂಶಗಳು, ಆರಂಭಿಕ ಪತ್ತೆ ಮತ್ತು ತಡೆಗಟ್ಟುವ ಆಹಾರ ಮತ್ತು ಜೀವನಶೈಲಿಯ ಬದಲಾವಣೆಗಳ ಕುರಿತು ಸಾರ್ವಜನಿಕ ಆರೋಗ್ಯ ಅಭಿಯಾನ ನಡೆಸಬೇಕು ಎಂದು ಸಲಹೆ ನೀಡಿದೆ.ದೈಹಿಕ ಚಟುವಟಿಕೆಯನ್ನು ಉತ್ತೇಜಿಸುವುದು, ಧೂಮಪಾನವನ್ನು ನಿಲ್ಲಿಸುವುದು, ಪರದೆಯ ಸಮಯವನ್ನು ಕಡಿಮೆ ಮಾಡುವುದು,ಸಕ್ಕರೆ ಮತ್ತು ಉಪ್ಪು ಸೇವನೆ ಕಡಿಮೆ ಮಾಡುವುದು, ಸಾಕಷ್ಟು ನಿದ್ರೆ ಮಾಡುವುದು, ಒತ್ತಡವನ್ನು ನಿಭಾಯಿಸುವಂತೆ ಸಲಹೆ ನೀಡಲಾಗಿದೆ. ಕೋವಿಡ್ 19 ಸೋಂಕು ಮತ್ತು ಲಸಿಕೆ ಎರಡರ ದೀರ್ಘಕಾಲೀನ ಪರಿಣಾಮವನ್ನು ಅಧ್ಯಯನ ಮಾಡಲು ಬಹು-ಶಿಸ್ತಿನ ಸಹಯೋಗದ ಅಧ್ಯಯನ ನಡೆಸಲು, ಐಸಿಎಂಆರ್ ನಂತಹ ನೋಡಲ್ ಏಜೆನ್ಸಿಯಿಂದ ದೊಡ್ಡ ಪ್ರಮಾಣದ ನಿರೀಕ್ಷಿತ ಪ್ರಕರಣ ನಿಯಂತ್ರಣ ಕ್ಲಿನಿಕಲ್ ಅಧ್ಯಯನಗಳಿಗೆ ಸಂಶೋಧನಾ ವರದಿ ತರಿಸಿಕೊಳ್ಳುವುದು ಅಗತ್ಯ ಎಂದು ಮಾಹಿತಿ ನೀಡಿದೆ.

# ಜಿಪಿಟಿ ಶಾಲಾ ಶಿಕ್ಷಕರನ್ನು ಬಿಎಲ್‌ಓ ಕಾರ್ಯದಿಂದ ಬಿಡುಗಡೆಗೊಳಿಸಲು ಮನವಿ

ಕಾರ್ಯದಲ್ಲಿ ತೊಡಗಿಸಿಕೊಳ್ಳುವುದರಿಂದ ಮಕ್ಕಳ ಶೈಕ್ಷಣಿಕ ಗುಣಮಟ್ಟ ಕುಸಿಯುವ ಭೀತಿ ಎದುರಾಗಿದೆ" ಎಂದರು.

ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಶಾಲಾ ಚಟುವಟಿಕೆಗಳ ಸುಗಮ ನಿರ್ವಹಣೆಗಾಗಿ ಜಿ.ಪಿ.ಟಿ. ಶಾಲಾ ಶಿಕ್ಷಕರನ್ನು ಬಿ.ಎಲ್.ಓ. ಜವಾಬ್ದಾರಿಯಿಂದ ಬಿಡುಗಡೆಗೊಳಿಸುವಂತೆ ಅವರು ಸರ್ಕಾರಕ್ಕೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿ.ಪಿ.ಟಿ. ಸಂಘದ ತಾಲ್ಲೂಕು ಉಪಾಧ್ಯಕ್ಷ ವಿಜಯಕುಮಾರ, ಸಿರವಾರ ತಾಲ್ಲೂಕು ಅಧ್ಯಕ್ಷ ಇಸಾಕ್, ಪ್ರಶಾಂತ, ಹನುಮಂತಪ್ಪ, ಬಸವರಾಜ, ಶ್ರುತಿ ಪತ್ತಾರ, ಶಂಕ್ರಪ್ಪ, ನರಸಿಂಹ.ಸಿ.ಎ.ಎಂ. ಸೇರಿದಂತೆ ಅನೇಕ ಶಿಕ್ಷಕರು ಉಪಸ್ಥಿತರಿದ್ದರು

# ಅನ್ನಭಾಗ್ಯ ಯೋಜನೆಯಲ್ಲಿ ಅಕ್ರಮ : ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮಕ್ಕೆ ಒತ್ತಾಯ

ಆರೋಪಿಸಿದರು. ಮಹಿಳೆಯರಿಗೆ ಉಚಿತ ಬಸ್ ಸೌಲಭ್ಯದಡಿ ಸರ್ಕಾರ ಸಮರ್ಪಕ ಹಣಕಾಸು ನೀಡುತ್ತದೆ. ಆದರೆ ಉಚಿತವಾಗಿ ಪ್ರಯಾಣ ಸುವ ಮಹಿಳೆಯರಿಗೆ ಸಾರಿಗೆ ಇಲಾಖೆ ಚಾಲಕ, ನಿರ್ವಾಹಕರು ಮಹಿಳೆಯರು ಕುರಿತು ಅಣಕದ ಮಾತುಗಳು ಆಡುತ್ತಾರೆ. ಇನ್ನೂ ಗ್ರಾಮೀಣ ಪ್ರದೇಶದಲ್ಲಿ ಸಮಯಕ್ಕೆ ಸರಿಯಾಗಿ ಬಸ್ಸುಗಳ ವ್ಯವಸ್ಥೆ ಇಲ್ಲ, ವಿದ್ಯಾರ್ಥಿಗಳ ಪಡಿಪಾಟೀಲು ಹೇಳತೀರದಾಗಿದೆ. ಲಿಂಗಸುಗೂರು ಬಸ್ ನಿಲ್ದಾಣದಲ್ಲಿ ವಿದ್ಯಾರ್ಥಿನಿ ಬಸ್ಸಿನಿಂದ ಕೆಳಗಡೆ ಬಿದ್ದು ಕಾಲು ಕಳೆದುಕೊಂಡಿದ್ದಾಳೆ. ಇದಕ್ಕೆ ಚಾಲಕ ನಿರ್ವಾಹಕ ಹಾಗೂ ಅಧಿಕಾರಿಗಳ ನಿರ್ಲಕ್ಷವೇ ಕಾರಣವಾಗಿದೆ. ಈ ಬಗ್ಗೆ ಸೂಕ್ತ ವ್ಯವಸ್ಥೆ ಕೈಗೊಳ್ಳದೇ ಇದ್ದರೆ ಸಾರಿಗೆ ಅಧಿಕಾರಿಗಳ ಮೇಲೆ ಕ್ರಮ ವಹಿಸಲಾಗುವುದೆಂದು ಸದಸ್ಯರಾದ ಶಾಂತಾ ಹಣಗಿ, ಲಕ್ಷ್ಮಿ ??ೀದೇವಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ ಇಓ ಉಮೇಶ, ಪಂಚಾಯತ್ ಸಹಾಯಕ ನಿರ್ದೇಶಕ ಪಂಪನಗೌಡ, ಜೆಸ್ಕಾಂ ಎಇಇ ಬನ್ನೆಪ್ಪ ಕರಿಬಂಟನಾಳ, ಸದಸ್ಯರಾದ ಗುಂಡಪ್ಪ ಸಾಹುಕಾರ ಮೇದಿನಾಪುರ, ಮಲ್ಲನಗೌಡ, ಅಸ್ಲಂಪಾಶ ಹಟ್ಟಿ, ಶಿವಕುಮಾರ ಕನ್ನಾಪುರಟ್ಟಿ, ಗೌಡಪ್ಪ ಗೋಲಪಲ್ಲಿ ಸೇರಿದಂತೆ ಇದ್ದರು.

## ಸಮಾಜದ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರನ್ನು ಅಮಾನತುಗೊಳಿಸಿ : ಲಿಂಗಪ್ಪ ಗೌಡೂರು ಆಗ್ರಹ

ತಾಲೂಕು ಆಡಳಿತದ ಪರವಾಗಿ ಶಿರಸ್ತೇದಾರ ಗೋವಿಂದಪ್ಪರಿಗೆ ಸಂಘಟನೆ ಪದಾಧಿಕಾರಿಗಳು ಪ್ರತಿಭಟನಾ ಸ್ಥಳದಲ್ಲಿಯೇ ಮನವಿ ಸಲ್ಲಿಸಿದರು.ಈ ಸಂದರ್ಭದಲ್ಲಿ ವಿವಿಧ ಸಂಘಟನೆಗಳ ಮುಖಂಡರಾದ ಮಲ್ಲಿಕಾರ್ಜುನ ಜೊಂಡೆ, ಹನುಮಂತ ಅಕ್ಕರಕಿ, ರಮೇಶ,ನರಸಪ್ಪ ಜರದಬಂಡಿ,ಬಸವರಾಜ ಗೋಪಾಳಪೂರ,ವಿಜಯಕುವಾ ರ,ರಮೇಶ ಬಾಗೂರ, ನಾಗರಾಜ ಮನ್ನಾಪೂರ,ಶಿವಕುಮಾರ ಸುಟ್ಟಿ ಹಾಗೂ ಇತರರು ಇದ್ದರು.ಪಟ್ಟಣದ ನಗರಗುಂಡ ಕ್ರಾಸ್ ಬಳಿ ಡಾ.ಬಾಬು ಜಗಜೀವನರಾಮ್ ಮೂರ್ತಿಗೆ ಮಾಲಾರ್ಪಣೆ ಮಾಡಿ,ಮಾತನಾಡಿ,ಮಹಾ ನಾಯಕರ ಜಯಂತಿ, ಪುಣ್ಯತಿಥಿ ಕಾರ್ಯಕ್ರಮಗಳಿದ್ದಾಗ ಪುರಸಭೆ ಸಿಬ್ಬಂದಿ ಮೂರ್ತಿ ಹಾಗೂ ಸುತ್ತಲಿನ ಜಾಗವನ್ನು ಸ್ವಚ್ಛಗೊಳಿಸಿ,ತಾಲೂಕು ಆಡಳಿತ ಅದರಲ್ಲೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಗೌರವ ಸಲ್ಲಿಸುವ ಪರಿಪಾಠ ಮೊದಲಿನಿಂದಲೂ ಬಂದಿದೆ.ಆದರೆ ದಲಿತ ವಿರೋಧಿ ಮನೋಭಾವ ಹೊಂದಿರುವ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಡಾ.ರಾಜಕುಮಾರ ಡೋಣಿ ಉದ್ದೇಶ ಪೂರ್ವಕ ಮರೆತಂತೆ ನಾಟಕವಾಡಿ, ಭಾನುವಾರ ನೆಪ ಹೇಳಿ ಕಲಬುರಗಿಗೆ ಹೋಗಿ ದ್ದಾರೆ.ಜಿಲ್ಲೆಯಲ್ಲಿ ಇತ್ತೀಚಿಗೆ ಮಹಾನ್ ನಾಯಕರ ಪ್ರತಿಮೆಗಳಿಗೆ, ಭಾವಚಿತ್ರಗಳಿಗೆ ಅವಮಾನ, ಅಗೌರವ ತೋರುವ ಚಟುವಟಿಕೆಗಳು ಹೆಚ್ಚಾಗಿರುವದು ವಿಷಾದದ ಸಂಗತಿ.ತಪ್ಪಿತಸ್ತರ ಮೇಲೆ ಕ್ರಮ ಕೈಗೊಳ್ಳದೇ ಇರುವದರಿಂದ ಇಂಥ ಅವಘಡಗಳು ನಿರಂತರವಾಗಿ ನಡೆಯುತ್ತಿವೆ ಎಂದು ಆರೋಪಿಸಿದರು.

# ರಾಯಚೂರಿನ ಐತಿಹಾಸಿಕ ಕೋಟೆ ಪ್ರದೇಶಕ್ಕೆ ಸಚಿವ ಎನ್‌ಎಸ್‌ಬಿ ಭೇಟಿ

ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇದನ್ನು ವೈಜ್ಞಾನಿಕವಾಗಿ ಪೂರ್ಣ ಪ್ರಮಾಣದಲ್ಲಿ ಸರಿಪಡಿಸಬೇಕು. ಶಾಶ್ವತವಾಗಿ ಈ ಪ್ರದೇಶ ಸುಂದರವಾಗಿ ಕಾಣುವಂತಾಗಬೇಕು ಎಂಬುದು ಜನರ ಒತ್ತಾಸೆಯಾಗಿದೆ ಎಂದು

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಚಿವರಿಗೆ ಮಾಹಿತಿ ನೀಡಿದರು.

ಈ ಕೋಟೆ ಕಂದಕದ ಕಾಮಗಾರಿಯು ಅಚ್ಚುಕಟ್ಟಾಗಿ ನಡೆದು ಇದು ಜನಾಕರ್ಷಣೀಯವಾಗಿ ಕಾಣಲು ಕೋಟೆ ಪ್ರದೇಶದಲ್ಲಿ ಲೈಟಿಂಗ್ ವ್ಯವಸ್ಥೆ ಮಾಡಿಸಬೇಕು. ಹಾಳಾಗಿರುವ ಗ್ರಿಲಗಳನ್ನು ಸರಿಪಡಿಸಿ ಪುನರೋತ್ಥಾನಕ್ಕೆ ಕ್ರಮವಹಿಸಲು ಸಚಿವರು ಸೂಚನೆ ನೀಡಿದರು.

ಲೈಟಿಂಗ್ ಮಾಡಿಸಲು ಈಗಾಗಲೇ ಪ್ರಸ್ತಾವಣೆ ಸಿದ್ದಪಡಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ತಿಳಿಸಿದರು. ಬಳಿಕ ಸಚಿವರು, ಸೂಪರ್ ಬಜಾರ್ ಹತ್ತಿರದ ಕಾಟಾ ದರ್ವಾಜ್ ಮತ್ತು ತೀನ್ ಕಂದಿಲ್ ವೃತ್ತಕ್ಕೆ ಭೇಟಿ ನೀಡಿ ಪರಿಶೀಲಿಸಿ, ಅಭಿವೃದ್ಧಿಪಡಿಸಲು ತಿಳಿಸಿದರು.

ಈ ವೇಳೆ ಮಹಾಪೌರರಾದ ನರಸಮ್ಮ ಮಾಡಗಿರಿ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರಾದ ಶ್ರೀಕೃಷ್ಣ ಶಾವಂತಗೇರಿ, ಲೋಕೋಪಯೋಗಿ ಇಲಾಖೆಯ ಅಭಿಯಂತರರಾದ ಮಹೇಶ, ರಾಘವೇಂದ್ರ, ಮೇನಕಾ ಪಟೇಲ್ ಹಾಗೂ ಇತರರು ಇದ್ದರು.

# ಮೊಹರಂ: ಕ್ಯಾದಿಗ್ಗೇರಾ ಗ್ರಾಮದಲ್ಲಿ ಅದ್ದೂರಿಯಾಗಿ ಆಚರಣೆ



**ಯುವ ಮಾರ್ಗ ಸುದ್ದಿ**

**ಅರಕೇರಾ,ಜು.7–** ಹಿಂದು ಮುಸ್ಲೀಂ ಭಾವೈಕ್ಯತೆ ಸಂಕೇತವಾದ ಮೊಹರಂ ಹಬ್ಬ ಶ್ರದ್ಧಾ ಭಕ್ತಿಯಿಂದ ಕ್ಯಾದಿಗ್ಗೇರಾ ಗ್ರಾಮದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು. ಪ್ರಮುಖ ಬೀದಿಗಳಲ್ಲಿ ಅಲಾಯಿ ದೇವರುಗಳ ಮೆರವಣಿಗೆ ಮಾಡುವ ಮೂಲಕ ಸಡಗರ ಸಂಭ್ರಮದಿಂದ ಸೋಮವಾರ ಮೊಹರಂ ಕಡೆ ದಿನ ಹಬ್ಬವನ್ನು ಆಚರಿಸಲಾಯಿತು.

ಕ್ಯಾದಿಗ್ಗೇರಾ ಗ್ರಾಮದಲ್ಲಿ ಎರಡು ಮಸೀದಿಗಳಿದ್ದು ಮೇಲಿನ ಮಸೀದಿ ಇನ್ನೊಂದು ಕೆಳಗಿನ ಮಸೀದಿಯಲ್ಲಿ ಎರಡು ಮಸೀದಿ ಗಳಲ್ಲಿ ಬಿಚ್ಚಪೀರ (ಕೂಲಪೀರ) ಮಾದರಿಯಲ್ಲಿ ದೇವರುಗಳನ್ನು ಸ್ಥಾಪಿಸಲಾಗಿದ್ದು. ಸಾಕಷ್ಟು ವಿವಿಧ ಬಗೆಬಗೆಯ ಹೂವಿನೊಂದಿಗೆ ಅಲಂಕಾರಮಾಡಿರುತ್ತಾರ್ಲ್ಲೆ, ಅಲಾಯಿ ದೇವರುಗಳಿಗೆ ಹಿಂದೂಗಳು ಭಕ್ತರು ಹೂವಿನಹಾರ, ಸಕ್ಕರೆ, ಕಾಯಿ, ಊದುಬತ್ತಿ, ಲೋಬಾನ ಸೇರಿ ಬೆಳ್ಳಿ ಸಾಮಾಗ್ರಿಗಳನ್ನು ತಮ್ಮ ಮಕ್ಕಳ ತೂಕದ ಸಕ್ಕರೆಯನ್ನು ಸಮರ್ಪಿಸಿದರು ರವಿವಾರ ರಾತ್ರಿಯಿಂದ ಸೋಮವಾರ ಬೆಳಗಿನವರೆಗೆ ಕತಲ್ ರಾತ್ರಿಯನ್ನು ಆದ್ದೂರಿಯಾಗಿ ಸಂಭ್ರಮಿಸಿದರು. .

ರಾತ್ರಿಯಿಡೀ ಮಸೀದಿಗಳಿಗೆ ಯುವಕರು ಕಲರ ಕಲರ ಸಮವಸ್ತ್ರದರಿಸಿ ಅಲಾಯಿ ಕುಣಿದರು. ಮಹಿಳೆಯರು ಸುತ್ತಾಡಿರುವುದು ಕಂಡು ಬಂತು. ಭಕ್ತರು ಅಗ್ನಿಕೆಂಡ ತುಳಿದಿರುವುದು ನೋಡುಗರಿಗೆ ರೋಮಾಂಚನವೆನಿಸಿತು. ಭಕ್ತಾಧಿಗಳು ಹರಕೆ ತೀರಿಸಲು ಬೆಂಗಳೂರು, ಪುನಾ ಸೇರಿ ವಿವಿಧ ನಗರಗಳಿಂದ ಗುಳೆ ಹೋದವರು ಹಬ್ಬಕ್ಕೆ ಮರಳಿ ಬಂದು ಮೊಹರಂದಲ್ಲಿ ಭಾಗವಹಿಸಿದ್ದರು.

ಬಣ್ಣ ಬಣ್ಣದ ಸಮವಸ್ತ್ರ ದರಿಸಿ ಕಾಲಿಗೆ ಗೆಜ್ಜೆ ಕಟ್ಟಿ, ಗುಂಪು ಗುಂಪಾಗಿ ಛತ್ರಿ, ಕೋಲು ಹಿಡಿದು ತಮಟೆ ತಾಳಕ್ಕೆ ಹೆಜ್ಜೆ ಹಾಕಿ ಅಲಾಯಿ ಕುಣಿತದಲ್ಲಿ ಪಾಲುಗೊಂಡು ಹಬ್ಬಕ್ಕೆ ಮತ್ತಷ್ಟು ಮೆರಗು ತಂದಕೊಟ್ಟರು. ಹೋದ ವರ್ಷ ಮೊಹರಂ ಹಬ್ಬದಲ್ಲಿ ಅಲಾಯಿ ಕುಳಿತ ಸಂದರ್ಬದಲ್ಲಿ ಸಾವನ್ನಪ್ಪಿದ ಯುವ ಹನುಮೇಶನ ಭಾವ ಚಿತ್ರ ಹಿಡಿದು ಯುವಕರು ಅಲಾಯಿ ಕುಣಿದರು. ಇಂದು ಸಾಯಂಕಲಾ ದಫನ ಕಾರ್ಯ ಸೋಮವಾರ ಅದ್ದೂರಿಯಾಗಿ ಜರುಗಿತು. ಯುವಕರು ತಂಡೋಪ ತಂಡವಾಗಿ ವಿವಿಧ ಬಗೆಯ ಕೋಲಾಟ ಕುಣಿತ ಪ್ರದರ್ಶಿಸಿದರು. ಸಹಸ್ರಾರು ಸಂಖ್ಯೆಯಲ್ಲಿ ಜನರು ಭಾಗವಹಿಸಿದ್ದರು. ಶಾಂತಿಯುತವಾಗಿ ಮೊಹರಂ ತೆರೆ ಕಂಡಿತು.

ಸಂದರ್ಭದಲ್ಲಿ ಕ್ರೀಷ್ಟಪ್ಪನಾಯಕ ಮಾಲಿಪಾಟೀಲ್ ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷರು.ಮೋನಪ್ಪನಾಯಕ ಎ ಪಿ ಎಂಸಿ ನಾಮನಿರ್ದೇಶಕರು ಕ್ಯಾದಿಗ್ಗೇರಾ ಮಲ್ಲಯ್ಯಗೌಡ, ಕ್ರೀಷ್ಟಪ್ಪನಾಯ ಕದೊರೆ.ಮುಕ್ಕಣ್ಣ ಗ್ರಾ ಪಂ.ಸದಸ್ಯರು,ಬಸವರಾಜ,ಅಮರೇಶಗೌಡ, ಶರಣಪ್ಪಗೌಡ, ಕಮಾಲಸಾಬ, ಜಮ್ಮುಲಕಾಸಿಂ, ಸೈಯದಸಾಬ ಹಾಗೂ ಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷ, ಸರ್ವ ಸದಸ್ಯರು ಗ್ರಾಮದ ಯುವಕರು ಅಧಿಕಾರಿವರ್ಗದವರು ಸುತ್ತಮುತ್ತಲ್ಲಿನ ಗ್ರಾಮಸ್ಥರು ಭಕ್ತಾಧಿಗಳು ಭಾಗವಹಿಸಿದ್ದರು.

# ಬೀದಿನಾಯಿಗಳು, ದನಗಳ ನಿಯಂತ್ರಣಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.7–** ರಾಯಚೂರ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಸುಮಾರು 24.75 ಲಕ್ಷ ರೂ ಮೊತ್ತದ ಟೆಂಡರ್ ಕರೆದು, ನಾಯಿಗಳ ಸಂತಾನಹರಣ ಶಸ್ತ್ರಚಿಕಿತ್ಸೆಗೆ ಸೂಕ್ತ ಕ್ರಮವಹಿಸಲಾಗುತ್ತಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಹೇಳಿದರು.

ಸೋಮವಾರ ದಂದು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ನೈರ್ಮಲ್ಯ ನಿರೀಕ್ಷಕರು ಹಾಗೂ ಮೇಲ್ವಿಚಾರಕರನ್ನು ಒಳಗೊಂಡಂತೆ ಸುಮಾರು 10 ತಂಡಗಳನ್ನು ರಚಿಸಿ ಪ್ರತಿನಿತ್ಯ ವಿವಿಧ



ಬಡಾವಣೆಗಳಲ್ಲಿ ಗಸ್ತಿ ನಡೆಸಿ ಬೀದಿ ನಾಯಿಗಳನ್ನು ಬೇರೆಡೆ ಸಾಗಿಸಲು ಕ್ರಮ ವಹಿಸಲಾಗುತ್ತಿದೆ. ಮಂಡ್ಯ ಜಿಲ್ಲೆಯ ಸಂಸ್ಥೆಯೊಂದಕ್ಕೆ ಟೆಂಡರ್ ನೀಡಲಾಗಿದ್ದು, ಸುಮಾರು 1,375 ನಾಯಿಗಳ ಸಂತಾನಹರಣ ಶಸ್ತ್ರಚಿಕಿತ್ಸೆಗೆ ಒಳಪಡಸುವ ಕಾರ್ಯ ನಡೆಸಲಾಗುತ್ತದೆ ಎಂದರು.

ಮುಂದಿನ ದಿನಗಳಲ್ಲಿ ಬೀದಿ ನಾಯಿಗಳ ಸಂಖ್ಯೆಯನ್ನು ಕಡಿಮೆ ಮಾಡುವ ಸಲುವಾಗಿ ವಿಶೇಷ ಕ್ರಮ ವಹಿಸಲಾಗುತ್ತಿದೆ. ನಾಯಿ, ದನ ಹಾಗೂ ಹಂದಿಗಳ ನಿಯಂತ್ರಣಕ್ಕೆ ಸಾರ್ವಜನಿಕರು ಸಹಕಾರ ನೀಡುವ ಮೂಲಕ ರಾಯಚೂರು ನಗರವನ್ನು ಸುಂದರ ಹಾಗೂ ಸ್ವಚ್ಛ ನಗರ ಮಾಡಲು ಸಾಧ್ಯವಿದೆ ಎಂದರು.

ಸಾರ್ವಜನಿಕರು ಘನತ್ಯಾಜ್ಯವನ್ನು ಸರಿಯಾಗಿ ನಿರ್ವಹಣೆ ಮಾಡಬೇಕು. ಪಾಸ್ಟಿಕ್ ಬಳಕೆ ಕಡಿಮೆ ಮಾಡಬೇಕು. ಬಿಡಾಡಿ ದನಗಳನ್ನು ಹಿಡಿಯುವ ಕಾರ್ಯಾಚರಣೆಯು ಪ್ರಾರಂಭವಾಗಿದ್ದು, ಜನರು ಬಿಡಾಡಿ ದನಗಳನ್ನು ಮನಸಿಗೆ ಬಂದಂತೆ ರಸ್ತೆಯಲ್ಲಿ ಬಿಡಬಾರದು. ಈಗಾಗಲೆ 11 ಸಾವಿರ ದಂಢವಿದಿಸಿ ಕೆಲವು ದನಗಳ ಮಾಲೀಕರಿಗೆ ಎಚ್ಚರಿಕೆ ನೀಡಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಆರೋಗ್ಯಾಧಿಕಾರಿ ಡಾ.ಶಾಕೀರ್, ಬಿ.ವೈ.ವಾಲ್ಮೀಕಿ, ಪಶು ವೈದ್ಯಾಧಿಕಾರಿ ಬಸವರಾಜ ಪಾಟೀಲ್, ಪಾಲಿಕೆಯ ಪರಿಸರ ಅಭಿಯಂತರಾರದ ಜೈಪಾಲ ರೆಡ್ಡಿ ಸೇರಿದಂತೆ ಇತರರು ಇದ್ದರು.

## ಮೊಹರಂ: ನಯಾ ಸವೇರಾ ಸಂಘಟನೆಯಿಂದ ಶರಬತ್ ವಿತರಣೆ

**ಕಲಬುರಗಿ,ಜು.7–** ಮೊಹರಂ ಅಂಗವಾಗಿ ನಗರದ ಎಮ್.ಕೆ ಮಿಲ್ ಜೀಲಾನಾಬಾದ್ ಮಿಸಬಾ ನಗರ್ ಚೌಕನಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ನೇತೃತ್ವದಲ್ಲಿ ಶರಬತ್ ಹಂಚಿ ಆಚರಣೆ ಮಾಡಲಾಯಿತು.ನಯಾ ಸವೇರಾ ಸಂಘಟನೆಯ ಅಧ್ಯಕ್ಷರಾದ ಮೋದಿನ್ ಪಟೇಲ್ ಅಣಬಿ ಅವರು ಕಾರ್ಯಕ್ರಮದ ಆಯೋಜನೆ ಮಾಡಿದರು, ಮೌಲನಾ ಅಕ್ತರ ಹುಸೇನ್ ಖಾಶ್ಮಿ ಉರ್ಫ್ ಬಂಗಾಲಿ ಬಾಬಾ ಫಾತೆಹ ಮಾಡಿದರು. ಈ ಸಂದರ್ಭದಲ್ಲಿ ರುಕುಮ್ ಪಟೇಲ್ ಕೂಡಿ, ಜೀಲಾನ್ ಗುತ್ತೇದಾರ, ಹಲವಾರು ಜನರು ಹಾಜರಿದ್ದರು.



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಸದ್ಯಕ್ಕೆ ಗ್ರೇಟರ್ ಬೆಂಗಳೂರಿಗೆ ಹೊಸ ಪ್ರದೇಶಗಳ ಸೇರ್ಪಡೆ ಇಲ್ಲ : ಡಿಕೆಶಿ

**ಬೆಂಗಳೂರು,ಜು.7–** ಗ್ರೇಟರ್ ಬೆಂಗಳೂರಿಗಾಗಿ ಬಿಬಿಎಂಪಿಯನ್ನು ಈಗಿರುವ ವ್ಯಾಪ್ತಿಯಲ್ಲೇ ಸಮಾನಂತರವಾಗಿ ವಿಭಜಿಸಲು ಅಂತಿಮ ವರದಿ ಸಲ್ಲಿಕೆಯಾಗಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ರಚನಾ ಸಮಿತಿ ಅಧ್ಯಕ್ಷ ರಿಜ್ವಾನ್ ಅರ್ಷದ್ ಅವರು ಇಂದು ಅಂತಿಮ ವರದಿಯನ್ನು ಸಲ್ಲಿಸಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ.ಶಿವಕುಮಾರ್, ಗ್ರೇಟರ್ ಬೆಂಗಳೂರಿಗೆ ಮತ್ತಷ್ಟು ಪ್ರದೇಶಗಳನ್ನು ಮುಂದಿನ ದಿನಗಳಲ್ಲಿ ಸೇರಿಸಲಾಗುವುದು. ಸದ್ಯಕ್ಕೆ ಯಾವುದೇ ಹೊಸ ಪ್ರದೇಶಗಳ ಸೇರ್ಪಡೆಯಿಲ್ಲದೆ ಸಮಾನಂತರವಾಗಿ ಬಿಬಿಎಂಪಿಯನ್ನು ಗ್ರೇಟರ್ ಬೆಂಗಳೂರನ್ನಾಗಿ ರಚಿಸಿ ಚುನಾವಣೆ ನಡೆಸುವುದಾಗಿ ತಿಳಿಸಿದರು.

ಎತ್ತಿನಹೊಳೆ ಯೋಜನೆ ಕುರಿತು ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಗೃಹಸಚಿವ ಡಾ.ಜಿ.ಪರಮೇಶ್ವರ್ ತಮ್ಮೊಂದಿಗೆ ಚರ್ಚೆ ನಡೆಸಿದ್ದಾರೆ. ಅವರ ಸ್ವಕ್ಷೇತ್ರ ಕೊರಟಗೆರೆಯಲ್ಲಿ ಯೋಜನೆ ಕೈಗೊಳ್ಳಬೇಕೆಂಬುದು ಅವರ ಬೇಡಿಕೆಯಾಗಿದೆ. ನೈಸರ್ಗಿಕವಾಗಿ ಇಲ್ಲಿನ ನೀರಿನ ಹರಿವಿದೆ. ಹೀಗಾಗಿ ಅವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಅನಿವಾರ್ಯ ಎಂದರು.



ನೀರಿನ ಸಂಗ್ರಹಕ್ಕೆ ಎರಡುಮೂರು ಕೆರೆಗಳನ್ನು ಸೂಚಿಸಿದ್ದಾರೆ. ಅವು 150 ಅಡಿಯಷ್ಟು ಆಳ ಇವೆ. ಅಲ್ಲಿಂದ ಲಿಫ್ಟ್ ಇರಿಗೇಷನ್ ಮೂಲಕ ನೀರನ್ನು ಹೊರ ಎತ್ತಬೇಕು. ಈ ಎಲ್ಲ ವಿಚಾರಗಳನ್ನು ಪರಮೇಶ್ವರ್ ಅವರೊಂದಿಗೆ ಚರ್ಚಿಸಲಾಗಿದೆ ಎಂದು ತಿಳಿಸಿದರು.

ನಾಳೆ ತಾವು ದೆಹಲಿಗೆ ತೆರಳುತ್ತಿದ್ದು ಎತ್ತಿನಹೊಳೆ ಯೋಜನೆಗೆ ಸಂಬಂಧಪಟ್ಟಂತೆ ತುಮಕೂರು ಮತ್ತು ಹಾಸನದಲ್ಲಿನ ಕಾಮಗಾರಿಗೆ ಕೇಂದ್ರ ಅರಣ್ಯ ಇಲಾಖೆಯ ಅನುಮತಿಗಾಗಿ ಕೇಂದ್ರ ಸಚಿವರನ್ನು ಭೇಟಿಯಾಗಲಿದ್ದೇನೆ. ಜೊತೆಗೆ ಕೇಂದ್ರ ಜಲಶಕ್ತಿ ಸಚಿವರ ಜೊತೆಗೂ ಚರ್ಚಿಸುವುದಾಗಿ ಹೇಳಿದರು. ಈ ವೇಳೆ ಪಕ್ಷದ ಕಚೇರಿಗೆ ಭೇಟಿ ನೀಡಿ ಹೈಕಮಾಂಡ್ ನಾಯಕರೊಂದಿಗೆ ಸಮಾಲೋಚನೆ ನಡೆಸುವುದು ರೂಢಿಸಂಪ್ರದಾಯ ಎಂದರು. ಡಿ.ಕೆ.ಶಿವಕುಮಾರ್ ಸಿಎಂ ಆಗಬೇಕೆಂದು ರಂಭಾಪುರಿ ಶ್ರೀಗಳು ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಲು ಡಿಸಿಎಂ ನಿರಾಕರಿಸಿದರು.

# ಅತ್ತ ಶಾಸಕರ ಜೊತೆ ಸುರ್ಜೇವಾಲ ಸಭೆ, ಇತ್ತ ಸಚಿವರೊಂದಿಗೆ ಸಿಎಂ ಪ್ರಗತಿ ಪರಿಶೀಲನೆ

**ಬೆಂಗಳೂರು,ಜು.7–** ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಒಂದೆಡೆ ಪಕ್ಷದ ಶಾಸಕರ ಜೊತೆ ಸಮಾಲೋಚನೆ ನಡೆಸಿ ಅಭಿಪ್ರಾಯ ಸಂಗ್ರಹಿಸುತ್ತಿದ್ದರೆ, ಮತ್ತೊಂದೆಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿವಿಧ ಇಲಾಖೆಗಳ ಜೊತೆ ಪ್ರಗತಿ ಪರಿಶೀಲನಾ ಸಭೆ ನಡೆಸುವ ಮೂಲಕ ಸರ್ಕಾರ ಮತ್ತು ಪಕ್ಷ ಚಟುವಟಿಕೆಗಳು ಏಕಕಾಲಕ್ಕೆ ಬಿರುಸು ಪಡೆದುಕೊಂಡಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಳಿಗ್ಗೆಯಿಂದಲೇ ಪ್ರಗತಿ ಪರಿಶೀಲನಾ ಸಭೆ ಆರಂಭಿಸಿದ್ದಾರೆ. ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಇಲಾಖೆ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ, ಆರ್ಥಿಕ ಇಲಾಖೆ, ಗೃಹ ಇಲಾಖೆಗಳ ಸರಣಿ ಸಭೆಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಗತಿ ಪರಿಶೀಲನೆ ನಡೆಸಿದ್ದಾರೆ.

ಬಜೆಟ್‌ನಲ್ಲಿ ಘೋಷಿಸಲಾದ ಯೋಜನೆಗಳ ಮತ್ತು ಭರವಸೆಗಳ ಅನುಷ್ಠಾನ ಇಲಾಖಾವಾರು ಬಿಡುಗಡೆಯಾಗಿರುವ ಅನುದಾನ ಮತ್ತು ಅದರ ವೆಚ್ಚ, ಬಾಕಿ ಯೋಜನೆಗಳ ಅಧಿಸೂಚನೆಗಳು, ಅನುದಾನದ ಲಭ್ಯತೆ ಸೇರಿದಂತೆ ಹಲವಾರು ವಿಚಾರಗಳ ಬಗ್ಗೆ ಮುಖ್ಯಮಂತ್ರಿಗಳು ಸುದೀರ್ಘ ಚರ್ಚೆ ನಡೆಸುತ್ತಿದ್ದಾರೆ.

ಈ ನಡುವೆ ಹಣಕಾಸು ಇಲಾಖೆಯಿಂದ ತೆರಿಗೆ ಸಂಪನ್ಮೂಲ ಸಂಗ್ರಹ ಮತ್ತು ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳ ಅನುದಾನ ಲಭ್ಯತೆ ಬಗ್ಗೆಯೂ ಮುಖ್ಯಮಂತ್ರಿ ಮಾಹಿತಿ ಕಲೆ ಹಾಕಿದ್ದಾರೆ. ಬಹಳಷ್ಟು ಇಲಾಖೆಗಳಲ್ಲಿ ಬಜೆಟ್ ಯೋಜನೆಗಳು ಈವರೆಗೂ ಅನುಷ್ಠಾನಗೊಳ್ಳದೆ ನನೆಗುದಿಗೆ ಬಿದ್ದಿವೆ. ಪ್ರತಿಯೊಂದಕ್ಕೂ ಅನುದಾನದ ಕೊರತೆಯ ನೆಪ ಹೇಳಿ ಅಧಿಕಾರಿಗಳು ಉಡಾಫೆ ನಡವಳಿಕೆ ಅನುಸರಿಸುತ್ತಿದ್ದಾರೆ ಎಂಬ ಆರೋಪಗಳಿದ್ದವು.



ಈ ಹಿನ್ನೆಲೆಯಲ್ಲಿ ಪ್ರತಿಯೊಂದು ಇಲಾಖೆಯ ಜೊತೆ ಪ್ರತ್ಯೇಕ ಮಾತುಕತೆ ನಡೆಸುವ ಮೂಲಕ ಅದರಲ್ಲೂ ತಲಾ ಒಂದು ಗಂಟೆ ಸುದೀರ್ಘ ಅವಧಿಯ ಸಮಾಲೋಚನೆ ಮೂಲಕ ಜಡತನ ಪ್ರದರ್ಶಿಸುವ ಇಲಾಖೆ ಮುಖ್ಯಸ್ಥರಿಗೆ ಮುಖ್ಯಮಂತ್ರಿ ಚಳಿ ಬಿಡಿಸಿದ್ದಾರೆ.

ಘೋಷಿತ ಎಲ್ಲಾ ಯೋಜನೆಗಳು ಈ ಆರ್ಥಿಕ ವರ್ಷದಲ್ಲೇ ಅನುಷ್ಠಾನಕ್ಕೆ ಬರಬೇಕು. ಒಂದು ವೇಳೆ ವಿಳಂಬವಾಗುವುದಾದರೆ ಅದಕ್ಕೆ ಸೂಕ್ತ ಕಾರಣಗಳನ್ನು ಮತ್ತು ವಿವರಣೆಗಳನ್ನು ನೀಡಬೇಕು ಎಂದು ಮುಖ್ಯಮಂತ್ರಿಯವರು ಸೂಚನೆ ನೀಡಿದ್ದಾರೆ.

ಇತ್ತ ಮುಖ್ಯಮಂತ್ರಿಗಳು ಸರಣಿ ಸಭೆ ನಡೆಸುತ್ತಿರುವ ವೇಳೆಯಲ್ಲೇ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳ 24 ಶಾಸಕರ ಜೊತೆ ವೈಯಕ್ತಿಕ ಮಟ್ಟದ ಚರ್ಚೆ ನಡೆಸಿದ್ದಾರೆ.

ಈ ಮೊದಲು ಕೇಳಿಬಂದಂತಹ ಗೊಂದಲದ ಹೇಳಿಕೆಗಳು, ಆರೋಪಗಳ ಹಿನ್ನೆಲೆಯಲ್ಲಿ ಎಚ್ಚೆತ್ತುಕೊಂಡ ಹೈಕಮಾಂಡ್ ಸುರ್ಜೇವಾಲ ಅವರ ಸಭೆಯ ಮೂಲಕ ಪಕ್ಷದ ಶಿಸ್ತನ್ನು ಮರುಸ್ಥಾಪಿಸಲು ಯತ್ನಿಸುತ್ತಿದೆ.

ವಸತಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂಬ ಗಂಭೀರ ಆರೋಪ ಮಾಡಿದ್ದ ಬಿ.ಆರ್.ಪಾಟೀಲ್ ತಣ್ಣಗಾಗಿದ್ದು, ಪಕ್ಷದ ವೇದಿಕೆಗಳಲ್ಲಿ ಕಾಣಿಸಿಕೊಳ್ಳಲಾರಂಭಿಸಿದ್ದಾರೆ. ಬೆಳಗಾವಿಯ ರಾಜು ಕಾಗೆ ಮೌನಕ್ಕೆ ಶರಣಾಗಿದ್ದಾರೆ. ಅಧಿಕಾರ ಹಂಚಿಕೆಯ ಬಗ್ಗೆ ಚರ್ಚೆ ಮಾಡಿ ಟಾಂಗ್ ನೀಡಲಾರಂಭಿಸಿದ್ದ ರಾಮನಗರದ ಇಕ್ಬಾಲ್ ಹುಸೇನ್, ಕುಣಿಗಲ್‌ನ ರಂಗನಾಥ್ ಮತ್ತಿತರರು ಡಿ.ಕೆ.ಶಿವಕುಮಾರ್‌ರವರ ನೋಟೀಸ್‌ನ ಗುಟುರಿಗೆ ತಣ್ಣಗಾಗಿದ್ದಾರೆ.

ಒಟ್ಟಿನಲ್ಲಿ ಮೇಲ್ನೋಟಕ್ಕೆ ಕಾಂಗ್ರೆಸ್ ಪಕ್ಷದ ಒರೆಕೋರೆಗಳು ಸದ್ಯಕ್ಕೆ ಸರಿಹೋದಂತೆ ಕಂಡುಬರುತ್ತಿದೆ. ರಾಜಕಾರಣ ನಿಂತ ನೀರಲ್ಲ ಎಂಬ ನಾಣ್ಣುಡಿಯಂತೆ ಯಾವಾಗ, ಏನು ನಡೆಯಲಿದೆ ಎಂಬುದು ಕೂಡ ಸದ್ಯಕ್ಕೆ ಊಹಿಸಲು ಕಷ್ಟಸಾಧ್ಯವಾಗಿದೆ.

# 200ಕ್ಕೂ ಹೆಚ್ಚು ಅಕ್ರಮ ವಲಸಿಗರ ಗಡಿಪಾರು

**ಬೆಂಗಳೂರು, ಜುಲೈ 7:–**ಅಕ್ರಮ ಬಾಂಗ್ಲಾ ವಲಸಿಗರನ್ನು ಗಡಿಪಾರು ಮಾಡುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ 200ಕ್ಕು ಹೆಚ್ಚು ಅಕ್ರಮ ವಲಸಿಗರನ್ನು ಗಡಿಪಾಡು ಮಾಡಲಾಗಿದೆ. ಎಫ್‌ಆರ್‌ಆರ್‌ಒ ಅಧಿಕಾರಿಗಳು ಅಕ್ರಮ ವಲಸಿಗರನ್ನು ಗುರುತಿಸಿ ನಮಗೆ ಮಾಹಿತಿ ನೀಡುತ್ತಾರೆ. ಅಕ್ರಮ ವಲಸಿಗರನ್ನು ಗಡಿಪಾರು ಮಾಡುವ ಪ್ರಕ್ರಿಯೆ ನಿರಂತರವಾಗಿ ನಡೆಯಲಿದೆ. ಒಂದು ದಿನ ಮಾಡಿ ನಿಲ್ಲಿಸುವುದಿಲ್ಲ ಎಂದು ಅವರು ಹೇಳಿದರು.

ಕಟ್ಟಡ ಕಾರ್ಮಿಕರಾಗಿ ಹೆಚ್ಚಿನ ಜನ ಇದ್ದಾರೆ ಎಂದು ಯಾರೋ ಹೇಳುತ್ತಾರೆ. ಅದನ್ನು ಪರಿಶೀಲಿಸಿ, ಅಂತವರು ಕಂಡುಬಂದರೆ ಕಸ್ಟಡಿಗೆ ತೆಗೆದುಕೊಂಡು ಗಡಿಪಾರು ಮಾಡುತ್ತೇವೆ ಎಂದರು.

ಅಕ್ರಮ ನುಸುಳುಕೋರರ ಬಗ್ಗೆ ಮೃದು ದೋರಣೆ ತೋರಲು ಏನು ಉಪಯೋಗ ಇದೆ. ಬಾಂಗ್ಲಾ ದೇಶದವರನ್ನು ಕರೆಸಿಕೊಂಡು ಓಟ್ ಹಾಕಿಸಿಕೊಳ್ಳುವಂತ ಪರಿಸ್ಥಿತಿ ಕಾಂಗ್ರೆಸ್ ಪಕ್ಷಕ್ಕೆ ಬಂದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿಗಳಾದ ರಣದೀಪ್ ಸಿಂಗ್ ಸುರ್ಜೇವಾಲಾ ಅವರು, ಕಳೆದ ವಾರ ನನ್ನನ್ನು ಭೇಟಿಗೆ ಕರೆದಿದ್ದರು. ಅವರು ಕರೆದಾಗ ನಾನು ಊರಲ್ಲಿ ಇದ್ದ ಕಾರಣ ಭೇಟಿ ಆಗಲು ಸಾಧ್ಯವಾಗಿರಲಿಲ್ಲ. ಮತ್ತೆ ಕರೆದರೆ ಭೇಟಿಯಾಗುತ್ತೇನೆ ಎಂದರು.

ರಂಭಾಪುರಿ ಶ್ರೀಗಳ ಹೇಳಿಕೆಯ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿ, ಅವರು ತಮ್ಮ ಅಭಿಪ್ರಾಯವನ್ನು ಹೇಳಿದ್ದಾರೆ. ಅದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು. ಸೋಲುದೇವನಹಳ್ಳಿ ಠಾಣೆ ವ್ಯಾಪ್ತಿಯಲ್ಲಿನ ಕೊಲೆಯತ್ನ ಪ್ರಕರಣದ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿ, ಆರೋಪಿತರು ಅರೆಸ್ಟ್ ಆಗಿದ್ದಾರೆ. ಪ್ರಕರಣದ ಸಂಪೂರ್ಣ ಮಾಹಿತಿ ಕೊಟ್ಟಿಲ್ಲ. ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆಯಿಂದ ಪ್ರೇರೆಪಿತರಾಗುತ್ತಿದ್ದಾರೆ ಎಂಬುದು ಗೊತ್ತಿಲ್ಲ. ಆ ರೀತಿಯಾಗಿ ಸಮಾಜದಲ್ಲಿ ಯುವಕರ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆಯೇ ಎಂಬುದರ ಕುರಿತು ಮನಶಾಸ್ತ್ರಜ್ಞರು ಅಧ್ಯಯನ ನಡೆಸಬೇಕು ಎಂದರು.

# ಬೊಜ್ಜು ಕರಗಿಸಲು ಸೀಬೆ ಮದ್ದು



ಸೀಬೆ ಎಂದರೆ ಎಲ್ಲರಿಗೂ ಇಷ್ಟ. ಈ ಹಣ್ಣುರುಚಿಯಾಗಿರುತ್ತದೆ.ಸೀಬೆಗೆ ಇನ್ನೊಂದು ಹೆಸರು ಪೇರಲ. ಮಾಗಿದಾಗ ವಿಶಿಷ್ಟ ಪರಿಮಳ ಹರಡುತ್ತದೆ. ಇದು ನೋಡಲೂ ಸಹ ಆಕರ್ಷಕವಾಗಿರುತ್ತದೆ. ಶ್ರಾವಣ ಬಂತು ಎಂದರೆ ಎಲ್ಲಿ ನೋಡಿದರೂ ಸೀಬೆಯೇ. ದೋರೆಗಾಯಿ ಇದ್ದಾಗಸೀಬೆಯಲ್ಲಿ ಸಿಹಿ, ಹುಳಿ ಮತ್ತು ಒಗರು ಮಿಳಿ ತಗೊಂಡಿದ್ದು ತಿನ್ನಲು ಬಲು ರುಚಿಯಾಗಿರುತ್ತದೆ.

ಸೀಬೆಗೆ ಸಂಸ್ಕೃತದಲ್ಲಿ ಅಮೃತಫಲಂ ಎಂದರೆ,ಹಿಂದಿಯಲ್ಲಿ ಅಮೃದ್, ತೆಲುಗಿನಲ್ಲಿ ಜಾಮ್, ತಮಿಳಿನಲ್ಲಿ ಕೊಯ್ಯಾಪಳಂ ಹಾಗೂ ಇಂಗ್ಲಿಷ್‌ನಲ್ಲಿಗೋವಾ ಎಂದು ಕರೆಯುತ್ತಾರೆ. ಸೀಬೆ ಹಣ್ಣಿನಲ್ಲಿ ಶರೀರಕ್ಕೆ ಅಗತ್ಯವಿರುವ ವಿವಿಧ ಪೋಷಕಾಂಶಗಳು ಸಾಕಷ್ಟಿವೆ. ಹಣ್ಣುದೊರೆಯುವ ಅವಧಿಯಲ್ಲಿ ಯಥೇಚ್ಛವಾಗಿ ಬಳಸಿ ಲಾಭಹೊಂದಬೇಕು. ಅತ್ಯಧಿಕ ಔಷಧೀಯ ಗುಣವಿರುವ ಇದು ಹಿತ್ತಲಗಿಡ. ಇದರ ಬೆಲೆಯೂ ಕಡಿಮೆಯಿದ್ದು, ಆರೋಗ್ಯಕ್ಕೆ ಹೆಚ್ಚು ಉಪಯುಕ್ತ. ಹಸಿರು ಕಾಯಿ ಒಗರಾಗಿರುತ್ತದೆ.

ದೋರೆಗಾಯಿ ಹೆಚ್ಚು ರುಚಿಯಾಗಿರುತ್ತದೆ. ಅಧಿಕ ಪ್ರಮಾಣದ ಶರ್ಕರ ಪಿಷ್ಟಗಳ ಜೊತೆಗೆ ಪ್ರೋಟೀನು, ಸುಣ್ಣ, ರಂಜಕ, ಕಬ್ಬಿಣ ಹಾಗೂ ಕ್ಯಾಲೊರಿ ಸತ್ವಗಳಿರುತ್ತವೆ.'ಸಿ' ಅನ್ನಾಂಗದ ಜೊತೆಗೆ ಇತರ ಅನ್ನಾಂಗಗಳು ಸ್ವಲ್ಪ ಮಟ್ಟಿಗೆ ಇರುತ್ತದೆ.ದೋರೆಗಾಯಿಗಳಲ್ಲಿ ಅಧಿಕ ಪೆಕ್ಟಿನ್ ಅಂಶವಿರುತ್ತದೆ.

ಸೀಬೆಹಣ್ಣನ್ನು ರುಚಿಗೋಸ್ಕರ ಇಲ್ಲವೇ ಆಹಾರವಾಗಿ ಬಳಸುವುದು ಮಾತ್ರವಲ್ಲ, ಅದು ಉತ್ತಮ ಔಷಧಿಯ ಗುಣ ಸಹ ಹೊಂದಿದೆ. ಅಧಿಕ ಪ್ರಮಾಣದ ಪ್ರೋಟೀನು ಇರುವ ಕಾರಣಮಾಂಸಖಂಡಗಳನ್ನು ಬಲಪಡಿಸಬಲ್ಲದು. ನಾರಿನ ಅಂಶ ಅಧಿಕವಿರುವ ಕಾರಣ ತಿಂದ ಆಹಾರ ಕರುಳುಗಳಲ್ಲಿ ಸುಲಭವಾಗಿ ಚಲಿಸುವಂತೆ ಮಾಡಬಲ್ಲದು. ಆದ್ದ–ರಿಂದ ಮಲಬದ್ಧತೆಗೆ ಇದು ದಿವೌಷಧ. ಈ ಉದ್ದೇಶಕ್ಕಾಗಿ

ರಾತ್ರಿ ಊಟದ ನಂತರ ಪ್ರತಿ ನಿತ್ಯ ಒಂದೆರೆಡು ಹಣ್ಣುಗಳನ್ನು ತಿಂದಲ್ಲಿ ಮುಂಜಾನೆ ಸುಖ ವಿರೇಚನ ಸಾಧ್ಯ.

ಹಣ್ಣುಗಳಲ್ಲಿರುವ ಕಬ್ಬಿಣದ ಅಂಶ ರಕ್ತಶುದ್ಧಿಗೆ ಸಹಾಯಕ. ಇದು 'ಸಿ' ಅನ್ನಾಂಗದ ಒಳ್ಳೆಯ ಮೂಲವಾದ್ದರಿಂದ ಹಲ್ಲಿನ ಒಸಡುಗಳು ಗಟ್ಟಿಗೊಳ್ಳುತ್ತವೆ. ಹಾಗೂ ಸ್ಕರ್ವಿ ರೋಗವನ್ನು ದೂರ ಮಾಡಬಲ್ಲದು.

ಸೀಬೆಯಲ್ಲಿ ಬೇಟಾ ಕೆರಾಟಿನ್, ಪೊಟ್ಯಾಶಿಯಂ ಮತ್ತು ಫೈಬರ್ ಅಂಶಹೆಚ್ಚಾಗಿರುವುದರಿಂದ ಇದು ಹೆಚ್ಚುಉಪಯೋಗಕಾರಿಯಾಗಿದ್ದು ರಕ್ತದಲ್ಲಿನ ಸಕ್ಕರೆ ಅಂಶ ಮತ್ತು ಕೊಲೆಸ್ಟ್ರಾಲ್ ನಿಯಂತ್ರಿಸುವ ಗುಣವನ್ನು ಹೊಂದಿದೆ ಹಾಗೂ ಹೃದಯದ ಸ್ವಾಸ್ಥ್ಯವನ್ನು ಕಾಪಾಡುತ್ತದೆ.

ತೂಕಕಡಿಮೆ ಮಾಡಿ ಕೊಳ್ಳಬೇಕೆಂದಿದ್ದರೆ ಸೀಬೆಹಣ್ಣು ಒಳ್ಳೆ ಆಯ್ಕೆ. ಸೀಬೆಯಲ್ಲಿ ಅವಶ್ಯಕ ಕಾರ್ಬೋಹೈಡ್ರೇಟ್ ಮತ್ತುಫೈಬರ್ ಇರುವುದರಿಂದ ಬೊಜ್ಜನ್ನು ನಿಯಂತ್ರಿಸುತ್ತದೆ. ಸೀಬೆಯಲ್ಲಿ ಕೊಬ್ಬಿನಾಂಶಕೇವಲ 0.9 ಇದ್ದು, 84 ಕ್ಯಾಲೊರಿ ಮಾತ್ರ ಇರುತ್ತದೆ.ಸೇಬು ಹಣ್ಣಿಗೆ ಹೋಲಿಸಿದರೆ ಸೀಬೆಯಲ್ಲಿ ಶೇ 42 ರಷ್ಟು ಕಡಿಮೆ ಕ್ಯಾಲೊರಿ ಮತ್ತು ಶೇ.38 ರಷ್ಟು ಕಡಿಮೆ ಕೊಬ್ಬಿನಾಂಶವಿದೆ.

ಮಕ್ಕಳಿಗೆ ಕೆಲವರು ಈಹಣ್ಣನ್ನು ತಿನ್ನಲು ಕೊಡುವುದಿಲ್ಲ ಅದಕ್ಕೆ ಕಾರಣ ಅವು ಕೆಮ್ಮನ್ನುಂಟುಮಡುತ್ತವೆ ಎಂಬ ಶಂಕೆ. ಆದರೆ ಇದು ತಪ್ಪು.ಎಳೆಯ ಮಕ್ಕಳಿಗೆ ಸಾಕಷ್ಟು ಹಣ್ಣನ್ನು ಕೊಡುತ್ತಿದ್ದಲ್ಲಿ 'ಸಿ' ಅನ್ನಾಂಗದ ಅಭಾವ ತಾನೇ ತಾನಾಗಿ ನಿವಾರಣೆಯಾಗುತ್ತದೆ.

ನುಣ್ಣಗೆ ಕುಟ್ಟಿ ಪುಡಿಮಾಡಿದ ಎಲೆಗಳನ್ನು ಸಂಧಿವಾತದಲ್ಲಿ ಬಳಸುತ್ತಾರೆ. ಅವುಗಳ ತಿಳಿರಸ ಅಪಸ್ಮಾರಕ್ಕೆ ಒಳ್ಳೆಯ ಔಷಧಿ. ಎಲೆಗಳನ್ನು ಕುದಿಸಿ ತೆಗೆದ ನೀರನ್ನು ಮುಕ್ಕಳಿಸುತ್ತಿದ್ದಲ್ಲಿ ಒಸಡುಗಳ ಊತ ಮತ್ತು ಹಲ್ಲು ನೋವು ತಗ್ಗುತ್ತದೆ.

ಸೀಬೆ ಮರದ ಎಲೆಗಳನ್ನು ಅರೆದು ಗಾಯ ಹಾಗೂ ವ್ರಣಗಳಿಗೆ ಪಟ್ಟು ಹಾಕುವುದುಂಟು.

# ಅರಿಶಿನದ ಪ್ರಯೋಜನಗಳು

ರಕ್ತದ ಸೋರಿಕೆಯನ್ನು ತಡೆಯಲು ಅಥವಾ ಗಾಯವನ್ನು ಗುಣಪಡಿಸಲು ಅರಿಶಿನನ್ನು ಸಾಮಾನ್ಯವಾಗಿ ಬಳಸಲಾಗುತ್ತದೆ. ಕೆಲವೊಮ್ಮೆ ಅರಿಶಿನ ಹಾಲನ್ನು ಕಫಾ ಕಡಿಮೆ ಮಾಡಲು ಮತ್ತು ನೋವು ನಿವಾರಿಸಲು ಬಳಸಲಾಗುತ್ತದೆ.

ಅರಿಶಿನದ ಬಳಕೆ ದೇಹವನ್ನು ಹೊಳೆಯುವಂತೆ ಮಾಡುತ್ತದೆ. ಬೆಳಿಗ್ಗೆ ಒಂದು ಲೋಟ ಹಾಲಿನೊಂದಿಗೆ ಅರ್ಧ ಟೀ ಚಮಚ ಅರಿಶಿನ ಮಿಶ್ರಣ ಮಾಡಿ ಕುಡಿಯುವುದರಿಂದದೇಹವು ಹೊಳಪನ್ನು ಹೊಂದುತ್ತದೆ. ಈ ರೀತಿ ಪ್ರತಿದಿನ ಅರಿಶಿನ ಸೇವನೆಯೊಂದಿಗೆ ದೇಹದಲ್ಲಿ ಹೆಚ್ಚುವರಿ ಕೊಬ್ಬಿನ ಸಂಗ್ರಹವು ಕ್ರಮೇಣ ಕಡಿಮೆಯಾ ಗುತ್ತದೆ. ಅದರಲ್ಲಿರುವ ಕ್ಯಾಲ್ಸಿಯಂ ಮತ್ತು ಇತರ ಪದಾರ್ಥಗಳು ತೂಕವನ್ನು ಕಡಿಮೆ ಮಾಡಲು ಸಹಾಯಕವಾಗಿವೆ.

ಆಯುರ್ವೇದದಲ್ಲಿ ಅರಿಶಿನವು ರಕ್ತ ಶುದ್ಧೀಕರಣದಲ್ಲಿಮುಖ್ಯವಾದುದು ಎಂದು ಹೇಳಲಾಗುತ್ತದೆ. ಅರಿಶಿನ ಬಳಕೆಯು ರಕ್ತವನ್ನು ಶುದ್ಧೀಕರಿಸುತ್ತದೆ. ಇದನ್ನು ತಿನ್ನುವ ಮೂಲಕ, ರಕ್ತದಲ್ಲಿ ಕಂಡುಬರುವವಿಷಕಾರಿವಸ್ತುಗಳು ಹೊರಬರುತ್ತವೆ ಮತ್ತು ರಕ್ತ ಪರಿಚಲನೆ ಸುಗಮವಾಗುತ್ತದೆ. ನಂತರ, ಧಮನಿಗಳಲ್ಲಿರುವ ರಕ್ತದ ಹರಿವು ಹೆಚ್ಚಾಗುತ್ತದೆ, ಇದರಿಂದಾಗಿ ವ್ಯಕ್ತಿಗೆ ಹೃದಯದ

ತೊಂದರೆಗಳು ಕಂಡುಬರುವು ದಿಲ್ಲ. ಸುಣ್ಣದೊಂದಿಗೆ ಅರಿಶಿನ ಮಿಶ್ರಣ ಮಾಡಿಲೇಪಿಸುವುದರಿಂದನೋವು ಕಡಿಮೆ ಯಾಗುತ್ತದೆ. ಇದಲ್ಲದೆ, ಹಾಲಿನಲ್ಲಿ ಅರಿಶಿನ ಮಿಶ್ರಣ ಮಾಡಿ ಕುಡಿಯುವುದರಿಂದ ಕಿವಿಸಂಬಂಧಿತ ಸಮಸ್ಯೆಗಳಿಂದ ದೂರ ಉಳಿಯಬಹುದು.



ಶೀತ ಅಥವಾಕೆಮ್ಮು ಸಮಸ್ಯೆಗಳಿಗೆ ಅರಿಶಿನದ ಹಾಲು ಸೇವನೆಯು ಪ್ರಯೋಜನಕಾರಿ ಎಂದು ಸಾಬೀತಾಗಿದೆ.ಬಿಸಿ ಹಾಲನ್ನು ಸೇವಿಸಿದನಂತರಶ್ವಾಸಕೋಶದಲ್ಲಿ ಉಂಟಾಗಿರುವ ಗುಣವಾಗುತ್ತದೆ.ಚಳಿಗಾಲದಲ್ಲಿ ಇದರ ಬಳಕೆಯು ನಿಮ್ಮನ್ನು ಆರೋಗ್ಯಕರವಾಗಿರಿಸುತ್ತದೆ.

ಹಾಲಿನೊಳಗೆ ಅರಿಶಿನ ಮಿಶ್ರಣ ಮೂಳೆಗಳನ್ನು ಬಲಪಡಿಸುತ್ತದೆ.ಹಾಲಿನಲ್ಲಿರುವ ಕ್ಯಾಲ್ಸಿಯಂ ಮೂಳೆಗಳನ್ನು ಬಲಪಡಿಸುತ್ತದೆ. ಮತ್ತು ಅರಿಶಿನಗುಣಲಕ್ಷಣಗಳಿಂದಾಗಿ ಪ್ರತಿರಕ್ಷಣಾ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುತ್ತದೆ.ಸಂಬಂಧಿತ ಮೂಳೆ ಸಮಸ್ಯೆಗಳನ್ನು ನಿವಾರಿಸುವಲ್ಲಿ ಇದು ಸಹಾಯ ಮಾಡುತ್ತದೆ.

ನೀವು ರಾತ್ರಿಯಲ್ಲಿ ನಿದ್ರಾಹೀನತೆ ಸಮಸ್ಯೆ ಹೊಂದಿದ್ದರೆ, ಅರಿಶಿನ ಹಾಲು ನಿಮ್ಮ ನಿದ್ರೆಗೆ ಸಹಾಯಕವಾಗಬಹುದು.ರಾತ್ರಿ ಊಟದ ನಂತರ ಮಲಗುವ ಮುನ್ನಅರ್ಧಲೋಟ ಹಾಲನ್ನು ಅರಿಶಿನೊಂದಿಗೆ ಕುಡಿಯಿರಿ

ಯುವ ಮಾರ್ಗ

ಮಂಗಳವಾರ : 08–07–2025

# ಲಿಂಗಸುಗೂರು ಸರಣಿ ಕಳುವು : ಸಾರ್ವಜನಿಕರಲ್ಲಿ ಆಂತಕ : ಸ್ಥಳಕ್ಕೆ ಎಸ್.ಪಿ.ಭೇಟಿ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.7–**ಪುರಸಭೆ ವ್ಯಾಪ್ತಿಯ ಕರಡಕಲ್ ಗ್ರಾಮದಲ್ಲಿ ಶನಿವಾರ ರಾತ್ರಿ ಸರಣಿ ಕಳ್ಳತನವಾಗಿದ್ದು, ನಗ, ನಾಣ್ಯ ದೋಚಿ ಕಳ್ಳರು ಪರಾರಿಯಾಗುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಈ ಘಟನೆಯಿಂದ ಸಾರ್ವಜನಿಕರಲ್ಲಿ ಆತಂಕ ಮನೆ ಮಾಡಿದರು.

ಬಾಗಿಲಿಗೆ ಬೀಗ ಹಾಕಿದ ಮನೆಗಳನ್ನೇ ಟಾರ್ಗೆಟ್ ಮಾಡಿದ ಕಳ್ಳರು ನಾಲ್ಕೈದು ಮನೆಗಳಲ್ಲಿ ಬೀಗ ಮುರಿದು ಕಳುವು ಮಾಡಿದ್ದಾರೆ. ಗುಂಡಯ್ಯಸ್ವಾಮಿ, ಪವಾಡೆಪ್ಪ ನಾಯಕ, ಮಹಾಂತೇಶ ಕುಂಬಾರ, ರುದ್ರಯ್ಯಸ್ವಾಮಿ ಎನ್ನುವವರ ಮನೆಗಳಲ್ಲಿ ಕಳ್ಳತನವಾಗಿದೆ. ಇದುವರೆಗೆ 45 ಗ್ರಾಂ. ಚಿನ್ನ, 150 ಗ್ರಾಂ. ಬೆಳ್ಳಿ, 60 ಸಾವಿರ ರೂಪಾಯಿ ನಗದು ಕಳುವಾಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ.

ಎರಡು ಬೈಕ್‌ಗಳಲ್ಲಿ ಐವರು ಬಂದು ಮನೆ ಬೀಗ



ಮುರಿದು ಕಳುವು ಮಾಡುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಇದರ ಬೆನ್ನು ಹತ್ತಿರುವ ಪೋಲಿಸರು ತನಿಖೆ ಕೈಗೊಂಡಿದ್ದಾರೆ. ಕಳುವಾದ ಮನೆಯವರು ಮೊಹರಂ ಹಬ್ಬದ ಕಥಲ್ ರಾತ್ರಿಯಂದು ದೇವರ ದರ್ಶನಕ್ಕೆ ತೆರಳಿದ್ದರು ಎನ್ನಲಾಗುತ್ತಿದೆ.

# ಕಲುಷಿತ ನೀರು ಸೇವನೆ ಮೂವರ ಸಾವು

**ಯಾದಗಿರಿ,ಜು.7–**ಕಲುಷಿತ ನೀರು ಸೇವಿಸಿ ಮೂವರು ಮೃತಪಟ್ಟಿರುವ ಘಟನೆ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ತಿಪ್ಪನಟಗಿ ಗ್ರಾಮದಲ್ಲಿ ಸಂಭವಿಸಿದೆ. ಘಟನೆಯಲ್ಲಿ 6 ಜನರ ಸ್ಥಿತಿ ಗಂಭೀರವಾಗಿದೆ.

ಮೃತರನ್ನು ದೇವಿಕೆಮ್ಮಹೊಟ್ಟಿ (48), ವೆಂಕಮ್ಮ (60), ರಾಮಣ್ಣ ಪೂಜಾರಿ (50) ಎಂದು ಗುರುತಿಸಲಾಗಿದೆ. 10 ದಿನಗಳ ಹಿಂದೆ ಕಲುಷಿತ ನೀರು ಸೇವಿಸಿ ತಿಪ್ಪನಟಗಿ ಗ್ರಾಮಸ್ಥರು ವಾಂತಿ–ಭೇದಿಯಿಂದ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ, ಚಿಕಿತ್ಸೆ ಫಲಿಸದೆ ಇಂದು ಮೂವರು ಸಾವನ್ನಪ್ಪಿದ್ದಾರೆ. 7 ಜನರ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಯಲ್ಲಿ



ಚಿಕಿತ್ಸೆ ಪಡೆಯುತ್ತಿದ್ದಾರೆ.ಹಲವರ ಆರೋಗ್ಯದಲ್ಲಿ ಚೇತರಿಕೆ ಕಂಡಿದ್ದು, ಇನ್ನೂ 20 ಮಂದಿ ಅಸ್ವಸ್ಥರಾಗಿದ್ದಾರೆ.ತಿಪ್ಪನಟಗಿ ಗ್ರಾಮಕ್ಕೆ ಸುರಪುರ ತಾಲ್ಲೂಕು ಅಧಿಕಾರಿ ರಾಜ ವೆಂಕಟಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು. ವಾಂತಿ–ಭೇದಿ ಪ್ರಕರಣ ವರದಿ ನೀಡುವಂತೆ ಜಿಲ್ಲಾ ಆರೋಗ್ಯಾಧಿಕಾರಿ ಮಹೇಶ್ ಬಿರಾದಾರ ಸೂಚಿಸಿದ್ದಾರೆ.

# ಸಮಾಜಮುಖಿ ಕಾರ್ಯ ನಿರಂತರವಿರಲಿ: ಸರಡಗಿ ಶ್ರೀ

**ಕಲಬುರ್ಗಿ,ಜು.7–** ಸಮಾಜ ಶ್ರೇಷ್ಟವಾದ ತಾಣ ಅಲ್ಲಿ ಯಾವತ್ತೂ ಸಮಾಜಮುಖಿ ಕಾರ್ಯಗಳು ನಿರಂತವಾಗಿ ನಡೆಯುತ್ತಾ ಇಂದಿನ ಯುವ ಪೀಳಿಗೆ ಧರ್ಮದ ಸಂಸ್ಕಾರದಲ್ಲಿ ನಡೆಯುವಂತೆ ಆಗಲಿ ಎಂದು ಶ್ರೀನಿವಾಸ ಸರಡಗಿಯ ರೇವಣಸಿದ್ಧ ಶಿವಾಚಾರ್ಯರು ಹೇಳಿದರು.

ನಗರದ ಮಹಾತ್ಮ ಬಸವೇಶ್ವರ ಕಾಲೋನಿಯ ಮಹಾದೇವ ಹನುಮಾನ ಮಂದಿರದ ಆವರಣದಲ್ಲಿ ಆಯೋಜಿಸಿದ್ದ ವೀರಶ್ಯವ ಲಿಂಗಾಯತ ಜಂಗಮ ಬಳಗವು ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಪ್ರದಾನ ಸಮಾರಂಭ ದಲ್ಲಿ ಹತ್ತು ಹನ್ನೆರಡನೇ ತರಗತಿಯಲ್ಲಿ ಹೆಚ್ಚು ಅಂಕಗಳನ್ನು ಗಳಿಸಿ ಜಂಗಮ ಸಮಾಜಕ್ಕೆ ಹೆಮ್ಮೆ ಪಡುವಂತಹ ಕಾರ್ಯಾ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಪುರಸ್ಕರಿಸಿ ಮಾತನಾಡಿದರು.

ಇಂತಹ ಕಾರ್ಯಗಳು ಸದಾ ಕಾಲವು ಉಳಿದು ಬೆಳೆಯುವಂತೆ ಆಗಲಿ ಈ ಮಕ್ಕಳ ಸಾಧನೆ ಗುರುತಿಸಿ ಗೌರವಿಸುತ್ತಿರುವುದು ಸಮಾಜಕ್ಕೆ ಗೌರವ ತರುವಂತಹ ಸಂಗತಿಯಾಗಿದೆ ಈ ಮಕ್ಕಳ ಸಾಧನೆ ಇಲ್ಲಿಂದ ಆರಂಭವಾಗಿದೆ ಅವರಿಗೆ ಪೋಷಕರು ಧರ್ಮ ಸಂಸ್ಕಾರಗಳನ್ನು ಹೇಳುತ್ತಾ ಸನ್ಮಾರ್ಗದಲ್ಲಿ ನಡೆಯುವಂತೆ ಪ್ರೇರೇಪಣೆ ಮಾಡಲಿ ಎಂದರು.

ಶ್ರಾವಣ ಮಾಸದಲ್ಲಿ ಪ್ರತಿ ದಿನವು ಒಬ್ಬಬ್ಬರ ಮನೆಯಲ್ಲಿ ಸಿದ್ಧಾಂತ ಶಿಖಾಮಣಿ ಗ್ರಂಥದ ಪಟನ ನಡೆಯಲಿ ಹದಿನೆಂಟು



ಬಾಷೆಯಲ್ಲಿ ಈ ಧರ್ಮ ಗ್ರಂಥವು ಮುದ್ರಣವನ್ನು ಪಂಚಪೀಠಗಳ ಶ್ರೀಗಳಾದ ಚಂದ್ರಶೇಖರ ಜಗದ್ಗುರುಗಳು ಮುದ್ರಿಸಿ ಧರ್ಮ ಪ್ರಸಾರವನ್ನು ಮಾಡುತ್ತಿದ್ದಾರೆ ಅವರ ಕಂಕರ್ಯವನ್ನು ಜಂಗಮ ಸಮಾಜ ಸದಾ ಕಾಲವು ನೆನಪಿಸಿಕೊಳ್ಳಬೇಕು ಎಂದು ಹೇಳಿ ಈ ಜಂಗಮ ಯುವ ಪಡೆ ಇಂತಹ ಕಾರ್ಯಕ್ರಮಗಳನ್ನು ಮುನ್ನಡೆಸಿಕೊಂಡು ಹೋಗುವಂತಾಗಲಿ ಎಂದು ಸರ್ವರಿಗೂ ಶುಭ ಹಾರೈಸಿದರು.

ಸಭೆಯಲ್ಲಿ ರಾಜ್ಯ ಸರ್ಕಾರ ಕೊಡುತ್ತಿರುವ ಕಿತ್ತೂರ ರಾಣಿ ಚನ್ನಮ್ಮ ಪ್ರಶಸ್ತಿ ಪುರಸ್ಕೃತರಾದ ಡಾ. ಸಂಗೀತಾ ಎಂ ಪಾಟೀಲ್ ಹಿರೇಮಠ ಅವರನ್ನು ಇದೆ ಸಂದರ್ಭದಲ್ಲಿ ಸನ್ಮಾನಿಸಿದರು ಪಿಯುಸಿ ಯಲ್ಲಿ ಶೇ.96.58 ಪ್ರತಿಶತ ಅಂಕ ಪಡೆದ ಕುಮಾರಿ ನಯನಾ ಜಿ ಹಿರೇಮಠ ಹಾಗೆ ಶ್ರೇಯಾ ಬಸಯ್ಯ ಸ್ಪೂರ್ತಿ ಎನ್ ಮಠಪತಿ ಶ್ರೇಯಾ ರುದ್ರೇಶ ಹಂಸ ಜಿ ಸ್ವಾಮಿ ರಾಚಯ್ಯ ಬ ಹಿರೇಮಠ

ಅವರುಗಳ ಸಾಧನೆಗೆ ಸನ್ಮಾನಿಸಿ ಗೌರವಿಸಲಾಯಿತು. ಆರಂಭದಲ್ಲಿ ಕಿರಣ್ ಪಾಟೀಲ್ ಅವರಿಂದ ಸ್ವಾಗತ ಗೀತೆ ಹಾಡಿದರು.ಪ್ರಾರ್ಥನಾ ಗೀತೆ ಯನ್ನು ಕಾವೇರಿ ಜಿ ಹಿರೇಮಠ ತಾಯಿ ಸರಸ್ವತಿಯನ್ನು ಸ್ಮರಿಸಿದರು. ಸ್ವಾಗತವನ್ನು ಗಂಗಾಧರ ಜಾಲಾದಿ ಕೋರಿದರು.

ವಿರುಪಾಕ್ಷ ಯ್ಯ ಸ್ವಾಮಿ ಮಠಪತಿ ಶಿವಕುಮಾರ್ ಸ್ವಾಮಿ ರುದ್ರೇಶ ಹಿಪ್ಪರಗಿ ರಾಜಶೇಖರ ಹಿರೇಮಠ ಗುರುಪಾದಯ್ಯ ಶಿವಾನಂದ ಚಿಕ್ಕಮಠ ಮೃತ್ಯುಂಜಯ ಪಾಟೀಲ ಮಹೇಶ ಮುಂತಾದವರು ಉಪಸ್ಥಿತರಿದ್ದ ಕಾರ್ಯಕ್ರಮವನ್ನು ಶರಣಬಸವ ನೀಲಾ ಅವರು ನಿರೂಪಣೆಯನ್ನು ಮಾಡಿದರು ಕಾರ್ಯಕ್ರಮದ ಕೊನೆಯಲ್ಲಿ ಸಂತೋಷ ನಂದಾಗಾವಿ ವಂದನಾರ್ಪಣೆ ನೆರವೇರಿಸಿದರು.

# ಜೂನ್ 3ನೇ ವಾರದಲ್ಲಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ

**ರಾಯಚೂರು,ಜು.7–**ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ(ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸಿದ ಎಲ್ಲಾ ವರ್ಗದ ಮಹಿಳಾ ಹಾಗೂ ಪುರುಷ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನಲ್ಲಿ 2025ರ ಜೂನ್ 3ನೇ ವಾರದಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಜಿಲ್ಲೆಯ ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.

ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು. ಕನಿಷ್ಠ 8 ತರಗತಿ ಓದಿರುವ ಅಭ್ಯರ್ಥಿಗಳು ಜುಲೈ 21 ರೊಳಗಾಗಿ ಮೋಬೈಲ್ ಸಂಖ್ಯೆ: 9986600631, 9986332736ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅಥವಾ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ನವೀನ ಆಸ್ಪತ್ರೆ ಪಕ್ಕದಲ್ಲಿ ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 09ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜು.7–** ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ಮತ್ತು ಜವಾಹರನಗರ ವಿದ್ಯುತ್ ಉಪ ಕೇಂದ್ರಗಳಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡರುವ ಪ್ರಯುಕ್ತ ಜುಲೈ 09ರ ಬೆಳಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆಯಾದ ವ್ಯಕ್ತಿ ಕೊಲೆ: ತನಿಖೆಯಿಂದ ಬಯಲು:ಮೂವರ ಬಂಧನ




**ಕಲಬುರಗಿ,ಜು.7–**ಮಹಿಳೆಯೊಂದಿಗೆ ಇದ್ದ ಲಿವಿಂಗ್ ಟುಗೆದರ್ ಸಂಬಂಧದಲ್ಲಿ ಉಂಟಾದ ಮನಸ್ತಾಪದಲ್ಲಿ ವ್ಯಕ್ತಿಯೊಬ್ಬನನ್ನು ಹತ್ಯೆ ಮಾಡಿದ ಆರೋಪದ ಮೇರೆಗೆ ನಗರದ ಮೂವರನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್ ಡಿ ಅವರು ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕಲಬುರಗಿ ಗಣೇಶ ನಗರದ ನಿವಾಸಿ ರಾಘವೇಂದ್ರ ನಾಯಕ್ ( 39) ಕೊಲೆಯಾದ ವ್ಯಕ್ತಿ.ಗುರುರಾಜ ಅಲಿಯಾಸ್ ಗುರು ಶೇಷಪ್ಪ ನೆಲೋಗಿ ( 36), ಅಶ್ವಿನಿ ಅಲಿಯಾಸ್ ತನು ರಾಜಶೇಖರ ಮಲ್ಲಾಬಾದ (26) ಮತ್ತು ಲಕ್ಷ್ಮೀಕಾಂತ ಮಲ್ಲಿಕಾರ್ಜುನ ಮಾಲಿ ಪಾಟೀಲ (28) ಬಂಧಿತ ಆರೋಪಿಗಳು

ಘಟನೆಯ ವಿವರ:

ನಗರದಲ್ಲಿ ಸಣ್ಣ ಪುಟ್ಟ ಕೆಲಸ ಮಾಡಿಕೊಂಡಿದ್ದ ರಾಘವೇಂದ್ರ ನಾಯಕನು ಸುಮಾರು 2 ತಿಂಗಳಿಂದ ಮನೆಯಿಂದ ಕಾಣೆಯಾಗಿದ್ದಾನೆ ಎಂದು ಆತನ ಪತ್ನಿ ಸುರೇಖಾ ಸ್ಟೇಷನ್ ಬಜಾರ್ ಠಾಣೆಗೆ ದೂರು ನೀಡಿದ್ದರು.ಪ್ರಕರಣದ ತನಿಖೆಗೆ ಉಪ ಪೊಲೀಸ್ ಆಯುಕ್ತರಾದ ಕನಿಕಾ ಸಿಕ್ರಿವಾಲ್,ಪ್ರವೀಣ್ ಹೆಚ್ ನಾಯಕ್ ಮಾರ್ಗದರ್ಶನದಲ್ಲಿ ಎಸಿಪಿ ಶರಣಬಸಪ್ಪ ಸುಬೇದಾರ ನೇತೃತ್ವದಲ್ಲಿ ಸ್ಟೇಷನ್ ಬಜಾರ ಪೊಲೀಸ್ ಠಾಣೆ ಪಿಐ ಶಕೀಲ ಅಹ್ಮದ ಅಂಗಡಿ, ಪಿಎಸ್ ಐ ಇಂದಿರವ್ವ ,ಎಎಸ್ ಐ ಶಿವಶರಣಪ್ಪ ಕೋರಳ್ಳಿ ಮತ್ತು ಸಿಬ್ಬಂದಿಗಳ ತಂಡ ರಚಿಸಲಾಗಿತ್ತು.

ರಾಘವೇಂದ್ರ ಇತನಿಗೆ ಕಲಬುರಗಿ ನಗರದ ಬ್ರಹ್ಮಪುರ ಬಡಾವಣೆ ವಡ್ಡರಗಲ್ಲಿ ಕೃಷ್ಣಾ ನಗರದ ಗುರುರಾಜ ಅಲಿಯಾಸ್ ಗುರು ಇತನೊಂದಿಗೆ ತಂಟೆ ತಕರಾರು ಇತ್ತು ಎಂದು ಮಾಹಿತಿ ದೊರೆಯಿತು.ಈ ನಿಟ್ಟಿನಲ್ಲಿ ಮತ್ತಷ್ಟು ತನಿಖೆ ಚುರುಕುಗೊಳಿಸಿ ಮಾಹಿತಿ ಕಲೆಹಾಕಿದಾಗ ರಾಘವೇಂದ್ರ ಈತನು ಮೊದಲು ಅಶ್ವಿನಿ ಅಲಿಯಾಸ್ ತನು ಎಂಬ ಮಹಿಳೆಯೊಂದಿಗೆ ಲಿವಿಂಗ್ ಟುಗೆದರ್ ಸಂಬಂಧದಲ್ಲಿ ಇದ್ದ ಎಂದು ಗೊತ್ತಾಯಿತು.ಸ್ವಲ್ಪ ದಿನಗಳ ನಂತರ ಅಶ್ವಿನಿ ರಾಘವೇಂದ್ರನನ್ನು ಬಿಟ್ಟು ಗುರುರಾಜ ಅಲಿಯಾಸ್ ಗುರು ಸಂಬಂಧ ಬೆಳೆಸಿದಳು. ಇದು ಇವರಿಬ್ಬರ ನಡುವೆ ವೈಷಮ್ಯಕ್ಕೆ ಕಾರಣವಾಯಿತು ಎಂದು ತಿಳಿದು ಬಂದಿದೆ.

ಕಳೆದ ಮಾರ್ಚ 12 ರಂದು ರಾತ್ರಿ 8.30ರ ಸುಮಾರಿಗೆ ರಾಘವೇಂದ್ರನು ಕಲಬುರಗಿ ನಗರದ ಸುಪರ ಮಾರ್ಕೆಟ್ ಹತ್ತಿರ ಇರುವ ಒಂದು ಲಾಡ್ಜ ಹತ್ತಿರ ಇದ್ದ ಮಾಹಿತಿ ಪಡೆದ ಮೂವರು ಆರೋಪಿಗಳು ಅಲ್ಲಿಂದ ಕಾರಿನಲ್ಲಿ ಆತನನ್ನು ಕೂಡಿಸಿಕೊಂಡು ಕೃಷ್ಣಾ ನಗರದ ಸ್ಮಶಾನ ಭೂಮಿ ಹತ್ತಿರ ಬಂದು ಅಲ್ಲಿ ಕೈಯಿಂದ ಮತ್ತು ಬಡಿಗೆಗಳಿಂದ ಹೊಡೆದು ಕೊಲೆಮಾಡಿ ನಂತರ ಶವವನ್ನು ಕಾರಿನಲ್ಲಿ ಹಾಕಿಕೊಂಡು ಶಹಾಬಾದ ಮುಖಾಂತರ ರಾಯಚೂರ ಜಿಲ್ಲೆಯ ಶಕ್ತಿ ನಗರದ ಕೃಷ್ಣಾ ಬ್ರಿಡ್ಜ್ ಮೇಲಿಂದ ನದಿಯಲ್ಲಿ ಶವವನ್ನು ಎಸೆದು ಬಂದಿದ್ದಾರೆ.ಪ್ರಕರಣದಲ್ಲಿ ಮತ್ತಷ್ಟು ಆರೋಪಿಗಳು ಭಾಗಿಯಾಗಿರುವ ಬಗ್ಗೆ ತನಿಖೆ ಕೈಗೊಳ್ಳಲಾಗುತ್ತಿದೆ ಎಂದು ಡಾ.ಶರಣಪ್ಪ ಅವರು ವಿವರಿಸಿದರು.

# ಅಥಣಿ ಬಳಿ ಕಾರು–ಬಸ್ ಡಿಕ್ಕಿ: ಅಫಜಲಪುರ ಮೂಲದ ನಾಲ್ವರ ದುರ್ಮರಣ

**ಅಥಣಿ,ಜು.7–** ತಾಲೂಕಿನ ಮುರಗುಂಡಿ ಬಳಿ ಕಾರು–ಸಾರಿಗೆ ಬಸ್ ಡಿಕ್ಕಿಯಾಗಿ ನಾಲ್ವರು ಮೃತಪಟ್ಟಿದ್ದು, ಇವರೆಲ್ಲರೂ ಕಲಬುರಗಿ ಜಿಲ್ಲೆಯ ಅಫಜಲಪುರ ತಾಲೂಕಿ ನವರು ಎಂದು ತಿಳಿದು ಬಂದಿದೆ.

ಮೃತರನ್ನು ಗಿರೀಶ ಬಳೂರರ್ಗಿ, ರಾಹುಲ್ ಮ್ಯಾಳೇಶಿ, ಸಂಗು ಅಮರಗೊಂಡ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಗಂಭೀರ ಗಾಯಗೊಂಡ ರಾಧಿಕಾ ಮ್ಯಾಳೇಶಿ ಎಂಬುವವರನ್ನು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಯಿತು.ಆದರೆ ಚಿಕಿತ್ಸೆ ಫಲಿಸದೇ ಅವರು ಮೃತರಾಗಿದ್ದಾರೆ.

ಕೊಲ್ಹಾಪುರ ಮಹಾಲಕ್ಷ್ಮಿ ದೇವಿ ದರ್ಶನ ಪಡೆದು ಕಾರಿನಲ್ಲಿ ವಾಪಸ್ಸಾಗುತ್ತಿದ್ದಾಗ ಈ



ದುರಂತ ನಡೆದಿದೆ.ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಜುಲೈ 3ನೇ ವಾರದಲ್ಲಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ

**ರಾಯಚೂರು,ಜು.7–**ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ(ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸಿದ ಎಲ್ಲಾ ವರ್ಗದ ಮಹಿಳಾ ಹಾಗೂ ಪುರುಷ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನಲ್ಲಿ 2025ರ ಜುಲೈ 3 ನೇ ವಾರದಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಜಿಲ್ಲೆಯ ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.

ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು. ಕನಿಷ್ಠ 8 ತರಗತಿ ಓದಿರುವ ಅಭ್ಯರ್ಥಿಗಳು ಜುಲೈ 21 ರೊಳಗಾಗಿ ಮೋಬೈಲ್ ಸಂಖ್ಯೆ: 9986600631, 9986332736ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅಥವಾ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ನವೀನ ಆಸ್ಪತ್ರೆ ಪಕ್ಕದಲ್ಲಿ ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 14ರಂದು ತ್ರೈಮಾಸಿಕ ಕೆಡಿಪಿ ಸಭೆ

**ರಾಯಚೂರು,ಜು.7–** ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ಆರ್.ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜುಲೈ 14ರ ಬೆಳಗ್ಗೆ 11 ಗಂಟೆಗೆ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ.

ಪ್ರಗತಿ ಮಾಹಿತಿಯೊಂದಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಗೆ ಕಡ್ಡಾಯ ಹಾಜರಾಗುವಂತೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**